ಬುಧವಾರ 08.10.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 69
Digital Varthe Kannada Daily
Volume 01 - Issue 69
Wednesday
08.10.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

## ಮಹರ್ಷಿ ವಾಲ್ಮೀಕಿಯವರು ದೇಶ ಕಂಡ ಅಪರೂಪದ ಸಾಹಿತಿ: ಸಿದ್ದು



ಬೆಂಗಳೂರು: ರಾಮಾಯಣ ದಂತಹ ಮಹಾನ್ ಗ್ರಂಥವನ್ನು ರಚಿಸಿದ ಮಹರ್ಷಿ ವಾಲ್ಮೀಕಿಯವರು ದೇಶ ಕಂಡ ಅಪರೂಪದ ಸಾಹಿತಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು ಇಂದು ಶ್ರೀ ಮಹರ್ಷಿ ವಾಲ್ಮೀಕಿ ತಪೋವನ ದಲ್ಲಿರುವ ಶ್ರೀ ವಾಲ್ಮೀಕಿ ಜಯಂತಿಯ ಅಂಗವಾಗಿ ಅವರ ಪ್ರತಿಮೆ ಗೆ ಮಾಲಾರ್ಪಣೆ ಮಾಡಿ ನಂತರ ಮಾಧ್ಯಮ ದವರೊಂದಿಗೆ ಮಾತನಾಡಿದರು.

ನಾಡಿನ ಜನತೆಗೆ ಮಹರ್ಷಿ ವಾಲ್ಮೀಕಿ ಜಯಂತಿಯ ಶುಭಾಶಯಗಳನ್ನು ತಿಳಿಸಿದರು. ವಾಲ್ಮೀಕಿ ಜಯಂತೋತ್ಸವದ ಮೂಲಕ ಅವರನ್ನುಸ್ಮರಿಸಲಾಗಿದೆ. ದೇಶ ಕಂಡ ಅಪರೂಪದ ಸಾಹಿತಿ. ರಾಮಾಯಣ ದಂತಹ ಮಹಾನ್ ಗ್ರಂಥದ ಕತೃ. ವಾಲ್ಮೀಕಿಯವರು ಶೂದ್ರ ಜನಾಂಗದಲ್ಲಿ ಜನಿಸಿದ್ದರೂ, ರಾಮಾಯಣದಂತಹ ಶ್ರೇಷ್ಠ ಗ್ರಂಥವನ್ನು ವಿಶ್ವಕ್ಕೆ ಪರಿಚಯಿಸಿದರು. ವಾಲ್ಮೀಕಿಯವರ ಪ್ರತಿಮೆಯನ್ನು 2017 ರಲ್ಲಿ ಸ್ಥಾಪಿಸಲಾಯಿತು. ವಾಲ್ಮೀಕಿ ಹಾಗೂ ಕನಕದಾಸರಂತಹ ಮಹಾನ್ ಸಂತರು ಸಮಾಜಮುಖಿಯಾಗಿ ಬದುಕಿದವರು. ಅವರು ಬೋಧಿಸಿದಂತೆ ಮಾನವೀಯ ಮೌಲ್ಯಗಳನ್ನು ಅನುಸರಿದವರು ಎಂದರು.

ಸಚಿವಸಂಪುಟ ಪುನರ್ ರಚನೆ: ನಾಯಕ ಸಮುದಾಯದ ಶಾಸಕರಿಗೆ ಸಚಿವ ಸಂಪುಟದಲ್ಲಿ ಪ್ರಾತಿನಿಧ್ಯ ನೀಡುವ ಬಗ್ಗೆ ಪ್ರತಿಕ್ರಿಯೆ ನೀಡಿ, ಮುಂದಿನ ದಿನಗಳಲ್ಲಿ ಸಚಿವಸಂಪುಟ ಪುನರ್ ರಚನೆ ನಡೆಯುವ ಸಂದರ್ಭದಲ್ಲಿ ಪರಿಗಣಿಸಲಾಗುವುದು ಎಂದರು.

ಮನುವಾದಿಗಳ ಕೈವಾಡ ಸರ್ವೋಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಗಳ ಮೇಲೆ ಶೂ ಎಸೆದಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯೆ ನೀಡುತ್ತಾ, ಮುಖ್ಯ ನ್ಯಾಯಮೂರ್ತಿಯವರೇ ಈ ಘಟನೆಯನ್ನು ಕ್ಷಮಿಸಿದ್ದು, ಅವರ ದೊಡ್ಡಗುಣವನ್ನು ಬಿಂಬಿಸುತ್ತದೆ. ಆದರೆ ಇಂತಹ ಕೃತ್ಯವನ್ನು ತೀವ್ರವಾಗಿ ಖಂಡಿಸುತ್ತೇನೆ. ಇದು ಮನುವಾದಿಗಳ ಕೈವಾಡವಾಗಿದೆ ಎಂದರು.

## ಬಿಲ್ ಪಾವತಿ ವಿವಾದದಲ್ಲಿ ಯುವಕನ ಕೊಲೆ: ಮೂವರು ಆರೋಪಿಗಳ ಬಂಧನ





ದೊಡ್ಡಬಳ್ಳಾಪುರ: ಬಾರ್‌ನಲ್ಲಿ ಕುಡಿತದ ವೇಳೆ ಬಿಲ್ ಪಾವತಿಸುವ ವಿಚಾರಕ್ಕೆ ಆರಂಭವಾದ ಜಗಳ ದಾರುಣ ಅಂತ್ಯ ಕಂಡಿದೆ.

ಯುವಕನೊಬ್ಬನನ್ನು ಹತ್ಯೆ ಮಾಡಿದ್ದ ಮೂವರು ಆರೋಪಿಗಳನ್ನು ದೊಡ್ಡಬಳ್ಳಾಪುರ ಗ್ರಾಮಾಂತರ ಪೊಲೀಸರು ಬಂಧಿಸಿದ್ದಾರೆ. ಬಂಧಿತರಾದವರು ಗೌತಮ್, ಮಹೇಶ್ ಹಾಗೂ ಅನಿಲ್ ಎಂದು ಗುರುತಿಸಲಾಗಿದೆ. ಇವರು ರಘು ಅಲಿಯಾಸ್ ಬುಲೆಟ್ ರಘು (30) ಎಂಬುವವನನ್ನು ಹತ್ಯೆ ಮಾಡಿದ ಆರೋಪ ಎದುರಿಸುತ್ತಿದ್ದಾರೆ. ಸೆಪ್ಟೆಂಬರ್ 25ರಂದು ಬಾಶೆಟ್ಟಹಳ್ಳಿ ಸಮೀಪದ ಬಾರ್‌ನಲ್ಲಿ ಆರೋಪಿಗಳು ಮದ್ಯಪಾನ ಮಾಡುತ್ತಿದ್ದ ವೇಳೆ ಬಿಲ್ ಪಾವತಿಸುವ ವಿಚಾರದಲ್ಲಿ ಗಲಾಟೆ ಉಂಟಾಗಿತ್ತು. ಆ ಸಮಯದಲ್ಲಿ ಹಳೆಯ ವೈಮನಸ್ಸು ಎತ್ತಿಕೊಂಡು ಸಿಮೆಂಟ್ ಇಟ್ಟಿಗೆಗಳಿಂದ ಹಲ್ಲೆ ನಡೆಸಿ ರಘುವನ್ನು ಕೊಂದಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಕೊಲೆ ಬಳಿಕ ತಲೆಮರೆಸಿಕೊಂಡಿದ್ದ ಮೂವರನ್ನೂ ಶೋಧ ಕಾರ್ಯಾಚರಣೆಯ ಮೂಲಕ ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಈ ಘಟನೆ ದೊಡ್ಡಬಳ್ಳಾಪುರ ಹೊರವಲಯದ ಬಾಶೆಟ್ಟಹಳ್ಳಿ ಗ್ರಾಮದಲ್ಲಿ ನಡೆದಿದ್ದು, ಪ್ರಕರಣದ ತನಿಖೆ ಮುಂದುವರಿದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ಮೊಗಳ್ಳಿ ಗಣೇಶ್ ಅವರ ಅಕಾಲಿಕ ಸಾವು ದಲಿತ ಸಾಹಿತ್ಯ ಕ್ಷೇತ್ರಕ್ಕೆ ತುಂಬಲಾರದ ನಷ್ಟ



ಕೃಷ್ಣರಾಜಪೇಟೆ: ನಾಡಿನ ಹೆಸರಾಂತ ಕಥೆಗಾರರು ಹಾಗೂ ಸಾಹಿತಿಗಳಾದ ಮೊಗಳ್ಳಿ ಗಣೇಶ್ ಅವರ ಅಕಾಲಿಕ ಸಾವು ದಲಿತ ಸಾಹಿತ್ಯ ಕ್ಷೇತ್ರಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಪೂರ್ಣಚಂದ್ರ ತೇಜಸ್ವಿ ಹೇಳಿದರು

ಅವರು ಕೃಷ್ಣರಾಜಪೇಟೆ ಪಟ್ಟಣದ ಪ್ರವಾಸಿ ಮಂದಿರದ ಆವರಣದಲ್ಲಿ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್, ತಾಲ್ಲೂಕು ಜಾನಪದ ಪರಿಷತ್, ಛಲವಾದಿ ಮಹಾಸಭಾ, ಕನ್ನಡಪರ ಹಾಗೂ ಪ್ರಗತಿಪರ ಸಂಘಟನೆಗಳ ಸಂಯುಕ್ತ ಆಶ್ರಯದಲ್ಲಿ ನಾಡಿನ ಖ್ಯಾತ ಕಥೆಗಾರರು ಹಾಗೂ ಸಾಹಿತಿಗಳಾದ ಮೊಗಳ್ಳಿ ಗಣೇಶ್ ಅವರ ಶ್ರದ್ಧಾಂಜಲಿ ಸಭೆಯಲ್ಲಿ ಭಾಗವಹಿಸಿ ಮುಗಳಿ ಗಣೇಶ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು.

ದಲಿತ ಸಾಹಿತ್ಯ ಕ್ಷೇತ್ರದಲ್ಲಿ ದೇವನೂರು ಮಹಾದೇವ ಸಿದ್ದಲಿಂಗಯ್ಯ ಅವರ ನಂತರ ಮೊಗಳ್ಳಿ ಗಣೇಶ್ ಅವರು ದಲಿತ ಸಾಹಿತ್ಯ ಕ್ಷೇತ್ರಕ್ಕೆ ತಮ್ಮ ಅಪಾರ ಕೊಡುಗೆಯನ್ನು ನೀಡಿದ್ದಾರೆ.

ದಲಿತರು ಶೋಷಿತರು ಹಾಗೂ ತುಳಿತಕ್ಕೊಳಗಾದವರ ನೋವು ನಲಿವುಗಳು ಹಾಗೂ ಭಾವನೆಗಳನ್ನು ಕಥಾಹಂದರದ ಮೂಲಕ ಶ್ರೀಸಾಮಾನ್ಯರ ಮನ ಮುಟ್ಟುವಂತೆ ಕಥೆಗಳನ್ನು ಬರೆದು ಸೈ ಅನಿಸಿಕೊಂಡಿದ್ದ ಗಣೇಶ್ ಅವರು ಕನ್ನಡ ಸಾಹಿತ್ಯ ಲೋಕಕ್ಕೆ ಅಪಾರವಾದ ಕೊಡುಗೆಯನ್ನು ನೀಡಿದ್ದಾರೆ. ಚನ್ನಪಟ್ಟಣ ತಾಲೂಕಿನ ಗ್ರಾಮದಲ್ಲಿ ಜನಿಸಿದ್ದರೂ ಮಂಡ್ಯ ಜಿಲ್ಲೆಯ ಮದ್ದೂರು ತಾಲೂಕಿನ ಮಾದನಾಯಕನಹಳ್ಳಿ ಗ್ರಾಮದಲ್ಲಿ ಅವರ ಇಚ್ಛೆಯಂತೆಯೇ ಅಂತ್ಯ ಸಂಸ್ಕಾರವನ್ನು ನೆರವೇರಿಸಲಾಗಿದೆ.

ಪ್ರಜಾವಾಣಿ ದೀಪಾವಳಿ ಕಥಾ ಸ್ಪರ್ಧೆಯಲ್ಲಿ ಸತತವಾಗಿ ಮೂರು ಕಥೆಗಳನ್ನು ಮೂರು ವರ್ಷಗಳ ಕಾಲ ನಿರಂತರವಾಗಿ ಪತ್ರಿಕೆಯಲ್ಲಿ ಬರೆದು ಬಹುಮಾನ ಗೆಲ್ಲುವ ಮೂಲಕ ಕಥಾ ಕ್ಷೇತ್ರಕ್ಕೆ ತಮ್ಮ ಅಮೂಲ್ಯವಾದ ಕೊಡುಗೆಯನ್ನು ನೀಡಿರುವ ಮೊಗಳ್ಳಿ ಗಣೇಶ್ ಅವರ ಕಾಲಿಕ ಸಾವು ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ಪೂರ್ಣಚಂದ್ರ ತೇಜಸ್ವಿ ಕಂಬನಿ ಮಿಡಿದರು.

ಕೃಷ್ಣರಾಜಪೇಟೆ ತಾಲ್ಲೂಕು ಜಾನಪದ ಪರಿಷತ್ ಅಧ್ಯಕ್ಷ ಕತ್ತರಘಟ್ಟ ವಾಸು, ಕಸಾಪ ಮಾಜಿ ಅಧ್ಯಕ್ಷ ಕೆ.ಆರ್.ನೀಲಕಂಠ, ಹರಿಚರಣ ತಿಲಕ್, ಬಲ್ಲೇನಹಳ್ಳಿ ಮಂಜುನಾಥ್, ಸಾಹಿತಿಗಳಾದ ಮಾರೇನಹಳ್ಳಿ ಲೋಕೇಶ್, ಚಾ.ಶಿ. ಜಯಕುಮಾರ್ ಮೊಗಳ್ಳಿ ಗಣೇಶ್ ಅವರ ಜೀವನ ಸಾಧನೆಗಳನ್ನು ಕುರಿತು ಮಾತನಾಡಿದರು.

ವಿಶ್ರಾಂತ ಪೊಲೀಸ್ ಅಧಿಕಾರಿ ರಮೇಶ್, ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಪದಾಧಿಕಾರಿಗಳಾದ ಶೀಳನೆರೆ ಶಿವಕುಮಾರ್, ನಾಗರಾಜು, ಕರವೇ ಜಿಲ್ಲಾಧ್ಯಕ್ಷ ಡಿ.ಎಸ್.ವೇಣು, ತಾಲ್ಲೂಕು ಕರವೇ ಅಧ್ಯಕ್ಷ ಟೆಂಪೋ ಶ್ರೀನಿವಾಸ್, ಛಲವಾದಿ ಮಹಾಸಭಾ ತಾಲ್ಲೂಕು ಅಧ್ಯಕ್ಷ ಊಚನಹಳ್ಳಿ ನಟರಾಜ್, ಗೌರವಾಧ್ಯಕ್ಷ ಸೋಮಸುಂದರ್, ಪತ್ರಕರ್ತರಾದ ಅಗ್ರಹಾರಬಾಚ ಹಳ್ಳಿ ಶ್ರೀನಿವಾಸ್ ಮತ್ತಿತರರು ಉಪಸ್ಥಿತರಿದ್ದರು.

## ಆದಿಕವಿ ಮಹರ್ಷಿ ವಾಲ್ಮೀಕಿ ತತ್ವಾದರ್ಶಗಳನ್ನು ನಾವೆಲ್ಲರೂ ಪಾಲಿಸೋಣ:ಸಚಿವ ಕೆ.ಹೆಚ್ ಮುನಿಯಪ್ಪ



ಬೆಂ.ಗ್ರಾ.ಜಿಲ್ಲೆ: ಶ್ರೀ ಮಹರ್ಷಿ ವಾಲ್ಮೀಕಿ ಮಹಾನ್ ಕಾಲಜ್ಞಾನಿ ಅವರು ನಡೆದ ಹಾದಿ ನಮ್ಮೆಲ್ಲರಿಗೂ ಮಾರ್ಗದರ್ಶನವಾಗದ್ದು ಅವರ ತತ್ವಾದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಆಹಾರ ನಾಗರೀಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಸಚಿವರು ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಹೆಚ್ ಮುನಿಯಪ್ಪ ಅವರು ಹೇಳಿದರು.

ದೇವನಹಳ್ಳಿ ಟೌನ್ ನಲ್ಲಿರುವ ಶ್ರೀ ಮಹರ್ಷಿ ವಾಲ್ಮೀಕಿ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಿದ್ದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತ್ಯೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ವಾಲ್ಮೀಕಿ ವಿಶ್ವಕ್ಕೆ ಅತಿದೊಡ್ಡ ಕಾವ್ಯ ರಾಮಾಯಣ ಕೊಡುಗೆ ನೀಡಿದ್ದಾರೆ. ಪ್ರತಿಯೊಬ್ಬರೂ ವಾಲ್ಮೀಕಿಯವರ ಆದರ್ಶ ಜೀವನವನ್ನು ತಮ್ಮ ಬದುಕಿನಲ್ಲಿ ಅಳವಡಿಸಿ ಕೊಳ್ಳಬೇಕಿದೆ ಎಂದರು.

ದೇವನಹಳ್ಳಿ ತಾಲ್ಲೂಕಿನ ವಾಲ್ಮೀಕಿ ಭವನದ ವಿವಿಧ ಕಾಮಗಾರಿಗಳಿಗೆ 1.91 ಕೋಟಿ ರೂ. ಹಣ ಬಿಡುಗಡೆಯಾಗಿದ್ದು, ಭವನದ ಕಾಪೌಂಡ್ ನಿರ್ಮಾಣ ಕಾಮಗಾರಿಗೆ ಶಂಕುಸ್ಥಾಪನೆ ಮಾಡಲಾಗಿದ್ದು, ವರ್ಷದೊಳಗೆ ಕಾಮಗಾರಿ ಮುಕ್ತಾಯಗೊಳಿಸುವಂತೆ ಸಂಬಂಧ ಪಟ್ಟ ಅಧಿಕಾರಿಗಳಿಗೆ ಸಚಿವರು ತಿಳಿಸಿದರು. ರಾಜ್ಯದ ವಾಲ್ಮೀಕಿ ಸಮುದಾಯದ ಅಭಿವೃದ್ಧಿಗೆ ಸರ್ಕಾರ ಹೆಚ್ಚಿನ ಒತ್ತು ನೀಡುತ್ತಿದೆ. ಗುಣಮಟ್ಟದ ಶಿಕ್ಷಣದ ಜತೆಗೆ ಮಕ್ಕಳ ಸರ್ವೋತೋಮುಖ ಅಭಿವೃದ್ಧಿ ಕನಸು ಕಂಡಿದ್ದೇವೆ. ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರೊತ್ಸಾಹಧನ ನೀಡಿ, ಮಕ್ಕಳಿಗೆ ಪ್ರೋತ್ಸಾಹಿಸುವ ಜತೆಗೆ ಸಮಾಜದ ಮುಖ್ಯವಾಹಿನಿಗೆ ತರಲು ಶ್ರಮಿಸುತ್ತಿದ್ದೇವೆ ಎಂದು ಹೇಳಿದರು. ಅರಣ್ಯ ಹಕ್ಕು ಕಾಯ್ದೆಯಡಿ ಪರಿಶಿಷ್ಟ ಪಂಗಡದ 104 ಫಲಾನುಭವಿಗಳಿಗೆ ಹಕ್ಕು ಪತ್ರ ವಿತರಿಸಲಾಗಿದೆ ಎಂದು ಸಚಿವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಅವರ ಜೀವನಾದರ್ಶಗಳ ಕುರಿತು ವಿಶೇಷ ಉಪನ್ಯಾಸವನ್ನು ಜಿಲ್ಲಾ ಕಸಾಪ ಅಧ್ಯಕ್ಷರಾದ ಕೃಷ್ಣಪ್ಪ ಅವರು ನೀಡಿದರು. ಈ ಸಂದರ್ಭದಲ್ಲಿ ವಿವಿಧ ಕ್ಷೇತ್ರದ ಸಾಧಕರು ಹಾಗೂ ಎಸ್ಸೆಸ್ಸೆಲ್ಸಿ, ಪಿಯುಸಿ ಪರೀಕ್ಷೆಯ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಸನ್ಮಾನಿಸಿ, ಅಭಿನಂದಿಸಲಾಯಿತು.

ಕಾರ್ಯಕ್ರಮಕ್ಕೂ ಮುನ್ನ ವೇಣುಗೋಪಾಲಸ್ವಾಮಿ ದೇವಸ್ಥಾನದಿಂದ ಮಹರ್ಷಿ ವಾಲ್ಮೀಕಿ ಭವನದ ವರೆಗೆ ಶ್ರೀ ಮಹರ್ಷಿ ವಾಲ್ಮೀಕಿಯವರ ಭಾವಚಿತ್ರ ಮೆರವಣಿಗೆ ಜರುಗಿತು. ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಎ.ಬಿ ಬಸವರಾಜು, ಜಿಲ್ಲಾ ಪಂಚಾಯತ್ ಸಿಇಓ ಡಾ. ಕೆ.ಎನ್ ಅನುರಾಧ, ಬಯಪ ಅಧ್ಯಕ್ಷರಾದ ವಿ. ಶಾಂತಕುಮಾರ್, ದೇವನಹಳ್ಳಿ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಅಧ್ಯಕ್ಷರಾದ ಸಿ.ಜಗನ್ನಾಥ್, ಅಪರ ಜಿಲ್ಲಾಧಿಕಾರಿ ಸೈಯಿದಾ ಅಯಿಷಾ, ದೇವನಹಳ್ಳಿ ಪುರಸಭೆ ಅಧ್ಯಕ್ಷರಾದ ಮುನಿಕೃಷ್ಣ, ಉಪಾಧ್ಯಕ್ಷರಾದ ಜಿ. ರವೀಂದ್ರ, ದೇವನಹಳ್ಳಿ ತಹಶೀಲ್ದಾರ್ ಅನಿಲ್ ಕುಮಾರ್, ತಾಲೂಕು ಪಂಚಾಯಿತಿ ಇಒ ಶ್ರೀನಾಥಗೌಡ, ದೇವನಹಳ್ಳಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಕೆ.ಸಿ ಮಂಜುನಾಥ್, ಪುರಸಭೆ ಮಾಜಿ ಅಧ್ಯಕ್ಷರಾದ ಚಿನ್ನಪ್ಪ, ದೇವನಹಳ್ಳಿಯ ವಾಲ್ಮೀಕಿ ಸಮುದಾಯದ ಅಧ್ಯಕ್ಷರಾದ ಎನ್.ನಾಗೇಶ್ ಬಾಬು, ಕಾರ್ಯದರ್ಶಿ ಎನ್.ರಾಮಚಂದ್ರಪ್ಪ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಕಲ್ಯಾಣಾಧಿಕಾರಿ ಎಸ್. ಪಾಂಡುರಂಗ ಹಾಗೂ ಜಿಲ್ಲೆಯ ಎಲ್ಲಾ ಚುನಾಯಿತ ಪ್ರತಿನಿಧಿಗಳು, ಎಲ್ಲಾ ನಾಮನಿರ್ದೇಶಿತ ಸದಸ್ಯರು ಸೇರಿದಂತೆ ವಾಲ್ಮೀಕಿ ಸಮುದಾಯದ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಬೆಂಗಳೂರಿನಲ್ಲಿ ಆನ್‌ಲೈನ್ ಹೂಡಿಕೆ ಹೆಸರಿನಲ್ಲಿ ಭಾರಿ ವಂಚನೆ




ಬೆಂಗಳೂರು: ಇತ್ತೀಚೆಗೆ ಆನ್‌ಲೈನ್ ವಂಚನೆಗಳು, ಸೈಬರ್ ಅಪರಾಧಗಳು ಹೆಚ್ಚುತ್ತಲೇ ಇವೆ. ದಿನ ಬೆಳಗಾದರೆ ಒಬ್ಬರಲ್ಲ ಒಬ್ಬರು ಈ ಅಪರಾಧ ಜಾಲಕ್ಕೆ ಸಿಲುಕಿ ಹಣವನ್ನು ಕಳೆದುಕೊಳ್ಳುತ್ತಾರೆ. ಇದೀಗ ಬೆಂಗಳೂರಿನ ಕೆಂಗೇರಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿಯೂ ಇಂಥದ್ದೇ ಪ್ರಕರಣ ದಾಖಲಾಗಿದ್ದು, 8 ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ. ಆನ್‌ಲೈನ್ ಹೂಡಿಕೆಯ ಹೆಸರಿನಲ್ಲಿ ವಂಚಿಸುತ್ತಿದ್ದ ಆರೋಪಿಗಳು ದೇಶ ವಿದೇಶದ ಜನರನ್ನು ತಮ್ಮ ಜಾಲದಲ್ಲಿ ಬೀಳಿಸುತ್ತಿದ್ದರು.

ಬೆಂಗಳೂರಿನಲ್ಲಿ ಆನ್‌ಲೈನ್‌ನಲ್ಲಿ ಹೂಡಿಕೆ ಮಾಡಿಸಿಕೊಂಡು ವಂಚಿಸುತ್ತಿದ್ದ ಜಾಲ ಪತ್ತೆಯಾಗಿದ್ದು, ಕೆಂಗೇರಿ ಪೊಲೀಸ್ ಠಾಣೆಯ ಪೊಲೀಸರು 8 ಆರೋಪಿಗಳನ್ನು ಬಂಧಿಸಿದ್ದಾರೆ. ಫೇಸ್‌ಬುಕ್, ವಾಟ್ಸಾಪ್, ಇನ್‌ಸ್ಟಾಗ್ರಾಂನಂತಹ ಸಾಮಾಜಿಕ ಜಾಲತಾಣಗಳ ಮೂಲಕ ಹೂಡಿಕೆಗೆ ಆಮಿಷವೊಡ್ಡಲಾಗುತ್ತಿತ್ತು. ದೇಶ ವಿದೇಶಗಳ ಜನರಿಗೆ ಹಣ ಹೂಡಿಕೆ ಮಾಡುವಂತೆ ಒತ್ತಾಯಿಸುತ್ತಿದ್ದರು. ಹೂಡಿಕೆ ಮಾಡಿದ ಹಣಕ್ಕಿಂತ ಹೆಚ್ಚು ಲಾಭ ನೀಡುವುದಾಗಿ ಆಮಿಷವೊಡ್ಡಿ ಕೋಟ್ಯಂತರ ರೂ.ಗಳನ್ನು ಹೂಡಿಕೆ ಮಾಡಿಸಿಕೊಂಡಿದ್ದಾರೆ.

ಅಕ್ಟೋಬರ್ 6 ರಂದು 7 ಕಡೆ ದಾಳಿ ನಡೆಸಿ 8 ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ. ಬಂಧಿತರಿಂದ 19 ಲ್ಯಾಪ್‌ಟಾಪ್, 40 ಮೊಬೈಲ್, 11 ಪೆನ್ ಡ್ರೈವ್, 42 ಸಿಮ್ ಕಾರ್ಡ್, 4 ಐಪ್ಯಾಡ್, 2 ಹಾರ್ಡ್ ಡಿಸ್ಕ್, 5 ಸಿಪಿಯು, 13 ಸೀಲುಗಳು, 10 ಮೆಮೊರಿ ಕಾರ್ಡ್ ಹಾಗೂ ವಿದೇಶಿ ಕರೆನ್ಸಿ, ಕರೆನ್ಸಿ ಕೌಟಿಂಗ್ ಮಷಿನ್, 6 ಕೋಟಿ ಬೆಲೆಬಾಳುವ ಸ್ಥಿರಾಸ್ತಿ ದಾಖಲೆಗಳನ್ನು ವಶಕ್ಕೆ ಪಡೆಯಲಾಗಿದೆ.

ಈ ಹಿಂದೆಯೂ ಕರ್ನಾಟಕದ ಹಲವೆಡೆ ಸೈಬರ್ ವಂಚನೆಯ ಪ್ರಕರಣಗಳು ಕಂಡುಬಂದಿವೆ. ಇದೇ ತಿಂಗಳಿನಲ್ಲಿ ಬೆಂಗಳೂರು ಮೂಲದ ಇಬ್ಬರು ವ್ಯಕ್ತಿಗಳು ನಕಲಿ ಆನ್‌ಲೈನ್ ಟ್ರೇಡಿಂಗ್ ಆ್ಯಪ್‌ಗಳನ್ನು ನಂಬಿ ಸೈಬರ್ ವಂಚನೆಗೆ ಒಳಗಾಗಿದ್ದರು. ಇಬ್ಬರೂ ಸೇರಿ ಒಟ್ಟೂ 2.28 ಕೋಟಿ ರೂ.ಗಳಷ್ಟು ನಷ್ಟ ಅನುಭವಿಸಿದ್ದರು. ಅದಲ್ಲದೇ ಮ್ಯಾಟ್ರಿಮೊನಿಯಲ್ಲಿ 59 ವರ್ಷದ ನಿವೃತ್ತ ಶಿಕ್ಷಕಿಯೊಬ್ಬರು ವ್ಯಕ್ತಿಯೊಬ್ಬನಿಂದ 2.3 ಕೋಟಿ ರೂ.ಗಳ ವಂಚನೆಗೆ ಒಳಗಾಗಿದ್ದರು.

## ಕ್ಷಯರೋಗಿಗಳಿಗಾಗಿ ಅರಿವು ಕಾರ್ಯಕ್ರಮ ಟಿಬಿ ಚಾಂಪಿಯನ್'ಗಳಿಗೆ ಸನ್ಮಾನ



ನೆಲಮಂಗಲ: ಸರ್ಕಾರಿ ಆಸ್ಪತ್ರೆಯಲ್ಲಿ ಕ್ಷಯ ರೋಗದ ಕುರಿತು ಅರಿವು ಮೂಡಿಸಲು ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಈ ಸಂದರ್ಭದಲ್ಲಿ ಆಸ್ಪತ್ರೆಯ ಸಿಬ್ಬಂದಿ ಕುಮಾರಸ್ವಾಮಿ ಮಾತನಾಡಿ, "ಕ್ಷಯ ರೋಗವು ಸಂಪೂರ್ಣವಾಗಿ ಗುಣವಾಗಬಹುದಾದ ಕಾಯಿಲೆ. ಇದಕ್ಕೆ ಭಯಪಡುವ ಅಗತ್ಯವಿಲ್ಲ," ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕ್ಷಯ ರೋಗದಿಂದ ಗುಣಮುಖರಾದ ಸುಮಾರು 50 ಮಂದಿಗೆ 'ಟಿಬಿ ಚಾಂಪಿಯನ್' ಎಂಬ ಬಿರುದು ನೀಡಿ, ಸಮುದಾಯದ ತಳಮಟ್ಟದಲ್ಲಿ ಕ್ಷಯ ರೋಗದ ಕುರಿತು ಜಾಗೃತಿ ಮೂಡಿಸಲು ಒಂದು ದಿನದ ತರಬೇತಿ ನೀಡಲಾಯಿತು. ಸರ್ಕಾರದಿಂದ ನೀಡಲಾಗುವ ನೇರ ಹಣ ವರ್ಗಾವಣೆ (DBT) ಸೇರಿದಂತೆ ವಿವಿಧ ಸೌಲಭ್ಯಗಳ ಬಗ್ಗೆ ಅವರಿಗೆ ಮಾಹಿತಿ ನೀಡಲಾಯಿತು.

ಕಾರ್ಯಕ್ರಮದಲ್ಲಿ ಆಸ್ಪತ್ರೆಯ ವೈದ್ಯರು, ಸಿಬ್ಬಂದಿಗಳು ಹಾಗೂ ರೋಗಿಗಳು ಭಾಗವಹಿಸಿ, ಕ್ಷಯ ರೋಗ ನಿರ್ಮೂಲನೆಗೆ ತಮ್ಮ ಬೆಂಬಲ ವ್ಯಕ್ತಪಡಿಸಿದರು.

ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ:
9538786812 / 9880655634

## ಬಿಹಾರದಲ್ಲಿ ಮಹಾಘಟಬಂಧನ್ ಸೀಟು ಹಂಚಿಕೆ ಅಂತಿಮ, ಆರ್‌ಜೆಡಿ 125 ಸ್ಥಾನಗಳಲ್ಲಿ ಸ್ಪರ್ಧಿಸುವ ಸಾಧ್ಯತೆ

ಪಾಟ್ನಾ: ಭಾರತೀಯ ಚುನಾವಣಾ ಆಯೋಗವು ಬಿಹಾರ ವಿಧಾನಸಭಾ ಚುನಾವಣೆಯ ದಿನಾಂಕಗಳನ್ನು ಘೋಷಿಸಲಾಗಿದೆ. ರಾಜ್ಯದ 243 ಸ್ಥಾನಗಳಿಗೆ ಎರಡು ಹಂತಗಳಲ್ಲಿ ಮತದಾನ ನಡೆಯಲಿದೆ. ಮೊದಲ ಹಂತವು ನವೆಂಬರ್ 6ರಂದು ಮತ್ತು ಎರಡನೇ ಹಂತವು ನವೆಂಬರ್ 11ರಂದು ನಡೆಯಲಿದೆ. ಫಲಿತಾಂಶಗಳನ್ನು ನವೆಂಬರ್ 14ರಂದು ಘೋಷಿಸಲಾಗುವುದು. ಈಗ, ಬಿಹಾರದಲ್ಲಿ ಯಾರು ಸರ್ಕಾರ ರಚಿಸುತ್ತಾರೆ ಎಂಬುದು ದೊಡ್ಡ ಪ್ರಶ್ನೆಯಾಗಿದೆ.

ಸೀಟು ಹಂಚಿಕೆಯನ್ನು ಅಧಿಕೃತವಾಗಿ ಘೋಷಿಸಲು ಮಹಾಘಟಬಂಧನ್ ಇಂದು ಪಾಟ್ನಾದಲ್ಲಿ ಪತ್ರಿಕಾಗೋಷ್ಠಿ ನಡೆಸಬಹುದು ಎಂದು ಅಂದಾಜಿಸಲಾಗಿದೆ. ರಾಷ್ಟ್ರೀಯ ಜನತಾ ದಳ (ಆರ್‌ಜೆಡಿ) ಮೈತ್ರಿಕೂಟದಲ್ಲಿ ಹಿರಿಯ ಪಾಲುದಾರ ಪಾತ್ರವನ್ನು ವಹಿಸುವ ನಿರೀಕ್ಷೆಯಿದೆ, ಆದರೆ ಕಾಂಗ್ರೆಸ್ ಕೇವಲ 55-57 ಸ್ಥಾನಗಳನ್ನು ಹೊಂದಿರುವಂತೆ ಕಾಣುತ್ತಿದೆ ಮತ್ತು ಪಾಟ್ನಾ ಜಿಲ್ಲೆಯ ಎಲ್ಲಾ ಸ್ಥಾನಗಳನ್ನು ಬಿಟ್ಟುಕೊಡುತ್ತಿದೆ. ಆರ್‌ಜೆಡಿಗೆ 125 ಸ್ಥಾನಗಳನ್ನು, ಕಾಂಗ್ರೆಸ್‌ಗೆ 55 ರಿಂದ 57 ಸ್ಥಾನಗಳನ್ನು, ಎಡ ಪಕ್ಷಗಳಿಗೆ 35 ಸ್ಥಾನಗಳನ್ನು, ಮುಖೇಶ್ ಸಾಹ್ನಿ ಅವರ ವಿಐಪಿ ಪಕ್ಷಕ್ಕೆ 20 ಸ್ಥಾನಗಳನ್ನು, ಪಶುಪತಿ ಪರಾಸ್‌ಗೆ ಮೂರು ಸ್ಥಾನಗಳನ್ನು ಮತ್ತು ಜಾರ್ಖಂಡ್ ಮುಕ್ತಿ ಮೋರ್ಚಾ (ಜೆಎಂಎಂ) ಗೆ ಎರಡು ಸ್ಥಾನಗಳನ್ನು ಹಂಚಿಕೆ ಮಾಡುತ್ತದೆ ಎಂದು ವರದಿಯಾಗಿದೆ.

ಕಾಂಗ್ರೆಸ್ ಮತ್ತು ಆರ್‌ಜೆಡಿ ನಡುವಿನ ಪ್ರಮುಖ ವಿವಾದವೆಂದರೆ ಕಾಂಗ್ರೆಸ್‌ಗೆ ಹಂಚಿಕೆಯಾದ ಸ್ಥಾನಗಳ ಸಂಖ್ಯೆ. ಕಾಂಗ್ರೆಸ್ 78 ಸ್ಥಾನಗಳಿಗೆ ಬೇಡಿಕೆ ಇಡುತ್ತಿದೆ ಎಂದು ವರದಿಯಾಗಿದೆ, ಆದರೆ ಆರ್‌ಜೆಡಿ ನಾಯಕ ತೇಜಸ್ವಿ ಯಾದವ್ ಕೇವಲ 48 ಸ್ಥಾನಗಳನ್ನು ನೀಡಲು ಸಿದ್ಧರಿದ್ದಾರೆ ಎಂದು ವರದಿಯಾಗಿದೆ. ಎರಡೂ ಪಕ್ಷಗಳ ನಡುವೆ ಸುಮಾರು 55 ಸ್ಥಾನಗಳ ಹೊಂದಾಣಿಕೆ ಮಾಡಿಕೊಳ್ಳುವ ನಿರೀಕ್ಷೆಯಿದೆ.

ಅಜಾರ್ಖಂಡ್ ಮುಕ್ತಿ ಮೋರ್ಚಾ (ಜೆಎಂಎಂ) ಕೂಡ ಬಿಹಾರದಲ್ಲಿ ಸ್ಪರ್ಧಿಸುವ ನಿರೀಕ್ಷೆಯಿದ್ದು, ಜಾರ್ಖಂಡ್ ಗಡಿ ಪ್ರದೇಶಗಳ ಮೇಲೆ ಕೇಂದ್ರೀಕರಿಸಿದೆ. ಪಕ್ಷವು ಸೀಟು ಹಂಚಿಕೆ ವ್ಯವಸ್ಥೆಯಲ್ಲಿ ಎರಡು ಸ್ಥಾನಗಳನ್ನು ಪಡೆಯಬಹುದು ಎಂದು ಮೂಲಗಳು ಸೂಚಿಸುತ್ತವೆ, ಅವರದಿಯಾಗಿದೆ. ಬಿಹಾರ ವಿಧಾನಸಭಾ ಚುನಾವಣಾ ದಿನಾಂಕಗಳ ಘೋಷಣೆಯ ನಂತರ, ರಾಜ್ಯದಲ್ಲಿ ರಾಜಕೀಯ ಚಟುವಟಿಕೆಗಳು ತೀವ್ರಗೊಂಡಿವೆ.

## ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡ ಆರೋಗ್ಯದಲ್ಲಿ ಏರುಪೇರು, ಆಸ್ಪತ್ರೆಗೆ ದಾಖಲು

ಬೆಂಗಳೂರು: ಮಾಜಿ ಪ್ರಧಾನಿ ಎಚ್‌ಡಿ ದೇವೇಗೌಡ ಅವರು ಅನಾರೋಗ್ಯಕ್ಕೀಡಾಗಿದ್ದು, ಬೆಂಗಳೂರಿನ ಮಣಿಪಾಲ್ ಆಸ್ಪತ್ರೆಗೆ ದಾಖಲಾಗಿದ್ದಾರೆ. ವೈದ್ಯರು ಚಿಕಿತ್ಸೆ ಮುಂದುವರೆಸಿದ್ದು, ಸದ್ಯ ದೇವೇಗೌಡರ ಆರೋಗ್ಯದಲ್ಲಿ ಚೇತರಿಕೆ ಕಂಡುಬಂದಿದೆ ಎನ್ನಲಾಗಿದೆ. ಮಣಿಪಾಲ್ ಆಸ್ಪತ್ರೆಯಲ್ಲಿ ವೈದ್ಯರ ಚಿಕಿತ್ಸೆಗೆ ಹೆಚ್‌ಡಿ ದೇವೇಗೌಡರು ಸ್ಪಂದಿಸುತ್ತಿದ್ದಾರೆ ಎಂದು ತಿಳಿದು ಬಂದಿದೆ. ಚಳಿ ಜ್ವರ ಹಾಗೂ ಯೂರಿನ್ ಇನ್ಫೆಕ್ಷನ್ ನಿಂದ ಬಳಲುತ್ತಿದ್ದಾರೆ ಎಂದು ತಿಳಿದುಬಂದಿದ್ದು, ಅಕ್ಟೋಬರ್ 06 ರಾತ್ರಿ ಮಣಿಪಾಲ್ ಆಸ್ಪತ್ರೆಗೆ ದಾಖಲಾಗಿದ್ದಾರೆ. ಡಾ ಸುದರ್ಶನ್ ಬಲ್ಲಾಳ್ ಅವರು ದೇವೇಗೌಡ್ರಿಗೆ ಐಸಿಯುನಲ್ಲಿ ಚಿಕಿತ್ಸೆ ನೀಡುತ್ತಿದ್ದಾರೆ ಎಂದು ಆಸ್ಪತ್ರೆ ವೈದ್ಯರು ಮಾಹಿತಿ ನೀಡಿದ್ದಾರೆ.

ಕಳೆದ ವರ್ಷ ಅಷ್ಟೇ ಅಂದ್ರೆ, 2024ರ ಫೆಬ್ರವರಿ 15ರಂದು ತೀವ್ರ ಜ್ವರ, ಕೆಮ್ಮು ಮತ್ತು ಉಸಿರಾಟದ ಸಮಸ್ಯೆ ಕಂಡುಬಂದ ಹಿನ್ನೆಲೆಯಲ್ಲಿ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರನ್ನು ಇದೇ ಮಣಿಪಾಲ ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು. ಚಿಕಿತ್ಸೆ ಬಳಿಕ ಆರೋಗ್ಯವಾಗಿ ಡಿಸ್ಚಾರ್ಜ್ ಆಗಿದ್ದರು.

ಹೆಚ್‌ಡಿ ದೇವೇಗೌಡ ಅವರಿಗೆ 92 ವಯಸ್ಸಾಗಿದ್ದು, ವಯೋಸಹಜ ಸಮಸ್ಯೆ ಎದುರಾಗಿದೆ. ಈ ಹಿನ್ನೆಲೆಯಲ್ಲಿ ಅವರಿಗೆ ಆಗಾಗ ಆರೋಗ್ಯ ಕೈಕೊಡುತ್ತಲೇ ಇದೆ. ಆದರೂ ಸಹ ದೊಡ್ಡಗೌಡರು ಸದ್ಯ ಸಕ್ರಿಯ ರಾಜಕಾರಣದಲ್ಲಿದ್ದು, ರಾಜ್ಯಸಭೆ ಸದಸ್ಯರಾಗಿದ್ದಾರೆ. ಈ ಇಳಿವಯಸ್ಸಿನಲ್ಲೂ ಹಾಸನ ಜಿಲ್ಲೆಯಲ್ಲಿ ಪ್ರವಾಸ ಮಾಡಿದ್ದರು. ಟ್ರಕ್ ಗಣೇಶ ಮೆರವಣಿಗೆ ಮೇಲೆ ಹರಿದು ದುರಂತ ಸಂಭವಿಸಿದ ಬಳಿಕ ಸಂತ್ರಸ್ಥರ ಕುಟುಂಬ ವರ್ಗವನ್ನು ದೇವೇಗೌಡ ಭೇಟಿಯಾಗಿದ್ದರು.

## ಹುಲಿಗೆಮ್ಮ ದೇವಾಲಯ ಪಾದಯಾತ್ರೆ ದುರಂತ: ಖಾಸಗಿ ಬಸ್ ಡಿಕ್ಕಿ – ಮೂವರು ಸಾವು

**ಕೊಪ್ಪಳ:** ಜಿಲ್ಲೆಯ ಕುಕನಪಳ್ಳಿ ಗ್ರಾಮದಲ್ಲಿ ಮಂಗಳವಾರ ಬೆಳಗಿನ ಜಾವ ನಡೆದ ಭೀಕರ ಅಪಘಾತದಲ್ಲಿ ಹುಲಿಗೆಮ್ಮ ದೇವಾಲಯಕ್ಕೆ ಪಾದಯಾತ್ರೆ ತೆರಳುತ್ತಿದ್ದ ಮೂವರು ಭಕ್ತರು ದುರ್ಮರಣ ಹೊಂದಿದ್ದಾರೆ. ಸಿಂದಗಿಯಿಂದ ಬೆಂಗಳೂರಿಗೆ ತೆರಳುತ್ತಿದ್ದ ಖಾಸಗಿ ಸ್ಲೀಪರ್ ಕೋಚ್ ಬಸ್ ನಿಯಂತ್ರಣ ತಪ್ಪಿ ಪಾದಯಾತ್ರಿಕರ ಮೇಲೆ ಹರಿದ ಪರಿಣಾಮ ಈ ಭೀಕರ ದುರಂತ ಸಂಭವಿಸಿದೆ.

ಘಟನೆಯಲ್ಲಿ ಅನ್ನಪೂರ್ಣ (40), ಪ್ರಕಾಶ್ (25), ಹಾಗೂ ಶರಣಪ್ಪ (19) ಎಂಬ ಮೂವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಮೃತರು ಗದಗ ಜಿಲ್ಲೆಯ ರೋಣ ತಾಲೂಕಿನ ತಳ್ಳಿಹಾಳ ಗ್ರಾಮದವರಾಗಿದ್ದು, ಪ್ರತಿವರ್ಷದಂತೆ ಈ ಬಾರಿ ಸಹ ಹುಲಿಗೆಮ್ಮ ದೇವಾಲಯಕ್ಕೆ ಪಾದಯಾತ್ರೆಯಾಗಿ ತೆರಳುತ್ತಿದ್ದರು. ಪಾದಯಾತ್ರೆಯ ಕೊನೆಯ ಹಂತದಲ್ಲಿದ್ದು, ದೇವಾಲಯದಿಂದ ಕೇವಲ ಮೂರು ಗಂಟೆಗಳ ನಡಿಗೆಯಷ್ಟು ದೂರದಲ್ಲಿದ್ದಾಗ ಈ ದುರಂತ ಸಂಭವಿಸಿದೆ. ಅಪಘಾತದಲ್ಲಿ ನಾಲ್ವರು ಭಕ್ತರು ಗಂಭೀರವಾಗಿ ಗಾಯಗೊಂಡಿದ್ದು, ಅವರನ್ನು ತಕ್ಷಣವೇ ಕೊಪ್ಪಳ ಜಿಲ್ಲಾ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ವೈದ್ಯರು ಗಾಯಾಳುಗಳ ಸ್ಥಿತಿ ಗಂಭೀರವಾಗಿರುವುದಾಗಿ ತಿಳಿಸಿದ್ದಾರೆ. ಸ್ಥಳೀಯರು ಮತ್ತು ಇತರ ಪಾದಯಾತ್ರಿಕರು ಘಟನಾ ಸ್ಥಳದಲ್ಲೇ ರಕ್ಷಣಾ ಕಾರ್ಯದಲ್ಲಿ ತೊಡಗಿಸಿಕೊಂಡು, ಗಾಯಾಳುಗಳನ್ನು ಆಸ್ಪತ್ರೆಗೆ ಸಾಗಿಸುವಲ್ಲಿ ಸಹಕರಿಸಿದರು. ಈ ಘಟನೆ ಸ್ಥಳೀಯರಲ್ಲಿ ಆಕ್ರೋಶವನ್ನು ಉಂಟು ಮಾಡಿದ್ದು, ನಿರ್ಲಕ್ಷ್ಯದಿಂದ ವಾಹನ ಚಲಾಯಿಸಿದ ಚಾಲಕನ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಆಗ್ರಹ ವ್ಯಕ್ತವಾಗಿದೆ.

ಘಟನೆಯ ಮಾಹಿತಿ ದೊರೆತ ತಕ್ಷಣ ಕೊಪ್ಪಳ ಜಿಲ್ಲಾ ಪೊಲೀಸ್ ಅಧೀಕ್ಷಕ ಡಾ. ರಾಮ್ ಅರಸಿದ್ದಿ ಅವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಅಪಘಾತದ ನಿಖರ ಕಾರಣ ತಿಳಿಯಲು ಮುಂದಿನ ತನಿಖೆ ಆರಂಭವಾಗಿದ್ದು, ಮುನಿರಾಬಾದ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಇದೇ ವೇಳೆ, ಪಾದಯಾತ್ರಿಕರ ಮೇಲೆ ದುರಂತಗಳ ಸರಣಿ ಸಂಭವಿಸಿರುವುದು ಚಿಂತೆ ಹುಟ್ಟಿಸಿದೆ. ಇದೇ ದಿನ ಬೆಳಿಗ್ಗೆ ಭಾನಾಪುರದ ಸಮೀಪದಲ್ಲಿ ನಡೆದ ಮತ್ತೊಂದು ಘಟನೆಯಲ್ಲಿ, ಪಾದಯಾತ್ರಿಕರ ಮೇಲೆ ಬೈಕ್ ಡಿಕ್ಕಿ ಹೊಡೆದ ಪರಿಣಾಮ ವೀರೇಶ್ ಹಳ್ಳಿಕೇರಿ ಎಂಬ ಭಕ್ತರು ಸಾವನ್ನಪ್ಪಿದ್ದಾರೆ. ಮತ್ತೊಬ್ಬ ಭಕ್ತ ರಮೇಶ್ ಗಂಭೀರ ಗಾಯಗೊಂಡಿದ್ದು, ಅವರನ್ನು ಕೂಡ ಆಸ್ಪತ್ರೆಗೆ ದಾಖಲಿಸಲಾಗಿದೆ. ಈ ಘಟನೆ ಕುಕನೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

ಒಟ್ಟಾರೆ, ಹುಲಿಗೆಮ್ಮ ದೇವಿಯ ಭಕ್ತರ ಪಾದಯಾತ್ರೆ ಈ ಬಾರಿ ದುರ್ಘಟನಾಶ್ರುತವಾಗಿದ್ದು, ನೂರಾರು ಭಕ್ತರ ಮನಸ್ಸನ್ನು ತೀವ್ರವಾಗಿ ಕದಿಯುವಂತಾಗಿದೆ. ಪೊಲೀಸರು ವಾಹನ ಸಂಚಾರ ನಿಯಂತ್ರಣ ಹಾಗೂ ಪಾದಯಾತ್ರಿಕರ ಸುರಕ್ಷತೆಗಾಗಿ ಹೆಚ್ಚುವರಿ ಕ್ರಮಗಳನ್ನು ಕೈಗೊಳ್ಳುವ ಕೆಲಸ ಆರಂಭಿಸಿದ್ದಾರೆ.


## ಚೆನ್ನೈ-ಬೆಂಗಳೂರು ಎಕ್ಸ್‌ಪ್ರೆಸ್ ವೇಯಲ್ಲಿ ಭೀಕರ ಸರಣಿ ಅಪಘಾತ – ಸ್ಥಳದಲ್ಲೇ 2 ಸಾವು

ಕೋಲಾರ ಜಿಲ್ಲೆಯ ಬಂಗಾರಪೇಟೆ ಬಳಿಯ ಚೆನ್ನೈ-ಬೆಂಗಳೂರು ಎಕ್ಸ್‌ಪ್ರೆಸ್ ವೇಯಲ್ಲಿ ಭೀಕರ ಸರಣಿ ರಸ್ತೆ ಅಪಘಾತ ಸಂಭವಿಸಿದೆ. ಈ ದುರ್ಘಟನೆಯಲ್ಲಿ ಇಬ್ಬರು ಸ್ಥಳದಲ್ಲೇ ಸಾವಿಗೀಡಾಗಿದ್ದು, ಹತ್ತಕ್ಕೂ ಹೆಚ್ಚು ಜನರು ಗಂಭೀರ ಗಾಯಗೊಂಡಿದ್ದಾರೆ. ಗಾಯಗೊಂಡವರನ್ನು ತುರ್ತು ಚಿಕಿತ್ಸೆಗೆ ಬಂಗಾರಪೇಟೆ, ಕೆಜಿಎಫ್ ಮತ್ತು ಕೋಲಾರದಲ್ಲಿರುವ ಆಸ್ಪತ್ರೆಗಳಲ್ಲಿ ದಾಖಲಿಸಲಾಗಿದೆ. ಅಪಘಾತವು ಬಂಗಾರಪೇಟೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಸಂಭವಿಸಿದೆ.

ಸ್ಥಳೀಯ ಅಧಿಕಾರಿಗಳ ಮಾಹಿತಿ ಪ್ರಕಾರ, ಬೆಂಗಳೂರು-ಚೆನ್ನೈ ಎಕ್ಸ್‌ಪ್ರೆಸ್ ವೇನಲ್ಲಿ ಒಂದು ಟೆಂಪೋ ವಾಹನಕ್ಕೆ ಇಚ್ಚರ್ ವಾಹನ ಡಿಕ್ಕಿ ಹೊಡೆಯುವ ಮೂಲಕ ಅಪಘಾತ ಆರಂಭವಾಗಿದೆ. ನಂತರ ಟೆಂಪೋ ಮತ್ತು ಆ್ಯಂಬುಲೆನ್ಸ್ ನಡುವೆ ಡಿಕ್ಕಿ ಸಂಭವಿಸುವುದರಿಂದ ಸರಣಿ ಅಪಘಾತ ಉಂಟಾಗಿದೆ. ಈ ಘಟನೆದಲ್ಲಿ ಆ್ಯಂಬುಲೆನ್ಸ್ ಚಾಲಕ ವಿಕ್ರಮ್ ಪಾಲ್ ಮತ್ತು ಟೆಂಪೋ ಚಾಲಕ ಶಿವರಾಜ್ ಮೃತರಾಗಿದ್ದಾರೆ. ಟೆಂಪೋದಲ್ಲಿ ಬೆಂಗಳೂರಿನ ಎಸ್‌ಕೆಸಿ ಕ್ಯಾಟರಿಂಗ್ ಸಂಸ್ಥೆಯ 15 ಜನ ಸಿಬ್ಬಂದಿ ಪ್ರಯಾಣಿಸುತ್ತಿದ್ದರು. ಈ ಸರಣಿ ಅಪಘಾತದಲ್ಲಿ ಹತ್ತಕ್ಕೂ ಹೆಚ್ಚು ಮಂದಿಗೆ ಗಂಭೀರ ಗಾಯಗಳಾಗಿವೆ.

ಸ್ಥಳಕ್ಕೆ ಬಂಗಾರಪೇಟೆ ಪೊಲೀಸ್ ಠಾಣಾ ಅಧಿಕಾರಿಗಳೊಂದಿಗೆ ಎಸ್‌ಪಿ ಶಿವಾಂಶು ರಜಪೂತ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ ಮತ್ತು ಗಾಯಾಳುಗಳನ್ನು ಆಸ್ಪತ್ರೆಗಳಿಗೆ ತುರ್ತು ಚಿಕಿತ್ಸೆಗಾಗಿ ರವಾನಿಸಿದ್ದಾರೆ. ಸ್ಥಳೀಯ ಪೊಲೀಸ್ ಅಧಿಕಾರಿಗಳು ಅಪಘಾತದ ನಿಖರ ಕಾರಣವನ್ನು ತನಿಖೆ ಮಾಡುತ್ತಿರುವುದಾಗಿ ತಿಳಿಸಿದ್ದಾರೆ.

## ಮೈಸೂರಿನಲ್ಲಿ ಭೀಕರ ಕೊಲೆ ಹಳೆಯ ದ್ವೇಷವೇ ಕಾರಣವೆಂದು ಶಂಕೆ



**ಮೈಸೂರು:**ಮೈಸೂರಿನ ವಸ್ತುಪ್ರದರ್ಶನ ಮೈದಾನದ ಸಮೀಪ ಮಧ್ಯಾಹ್ನದಲ್ಲಿ ಒಂದು ಭೀಕರ ದಾಳಿಯ ಘಟನೆ ನಡೆದಿದೆ. ಸ್ಥಳೀಯ ಪೊಲೀಸ್ ಇಲಾಖೆಯ ವರದಿಯ ಪ್ರಕಾರ, ಮಧ್ಯಾಹ್ನದ ಸಮಯದಲ್ಲಿ ದುಷ್ಕರ್ಮಿಗಳ ಗುಂಪೊಂದು ವ್ಯಕ್ತಿ ವೆಂಕಟೇಶ್ (ಕೆಯಾತಮಾರನಹಳ್ಳಿ ನಿವಾಸಿ), ಅಲಿಯಾಸ್ ಮುಖಾಮುಚ್ಚಿ, ಅಲಿಯಾಸ್ ಗಿಲಿಗಿಲಿ ಅವರನ್ನು ಮಾರಕಾಸ್ತ್ರಗಳೊಂದಿಗೆ ಗುರಿಯಾಗಿಸಿಕೊಂಡು ಅತಿ ದೃಷ್ಟ ಘಟನೆಯನ್ನಂಟು ಮಾಡಿದ ಘಟನೆ ವರದಿ ಆಗಿದೆ.

ಕೊಲೆಯ ದಾರುಣ ಘಟನೆ ವೆಂಕಟೇಶ್ ತಮ್ಮ ಕಾರಿನಲ್ಲಿ ಪ್ರಯಾಣಿಸುತ್ತಿದ್ದಾಗ, ಯುವಕರ ಗುಂಪೊಂದು ಲಾಂಗ್‌ಗಳಂತಹ ಮಾರಕಾಸ್ತ್ರಗಳಿಂದ ದಾಳಿ ನಡೆಸಿತು. ಆರೋಪಿಗಳು ಕಾರಿನಿಂದ ಅವರನ್ನು ಹೊರಗೆ ಎಳೆದು, ತಲೆ, ಕೈ, ಕಾಲು ಮತ್ತು ದೇಹದ ಇತರ ಭಾಗಗಳ ಮೇಲೆ ತೀವ್ರ ಹಲ್ಲೆ ನಡೆಸಿದರು. ದಾಳಿಯ ತೀವ್ರತೆಯಿಂದ ವೆಂಕಟೇಶ್ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ದಾಳಿ ನಂತರ, ದುಷ್ಕರ್ಮಿಗಳು ಸ್ಥಳವನ್ನು ತಕ್ಷಣ ಬಿಟ್ಟು ಪರಾರಿಯಾಗಿದ್ದಾರೆ.

ಹಳೆ ವೈಷಮ್ಯ ಕಾರಣ ಎಂದು ಕಾಣಿಕೆ ಪೊಲೀಸರ ಪ್ರಾಥಮಿಕ ತನಿಖೆಯ ಪ್ರಕಾರ, ಈ ಕೊಲೆಗೆ ಹಳೆಯ ವೈಷಮ್ಯ ಮುಖ್ಯ ಕಾರಣವಾಗಿದೆ. ಇತ್ತೀಚೆಗೆ ವರುಣಾ ಗ್ರಾಮದ ಹೋಟೆಲ್ ಮುಂಭಾಗದಲ್ಲಿ ಕ್ಯಾತಮಾರನಹಳ್ಳಿಯ ರೌಡಿ ಶೀಟರ್ ಕಾರ್ತಿಕ್ ಕೊಲೆಯಾಗಿದ್ದ ಘಟನೆ ಸಂಭವಿಸಿದ್ದರು. ಕಾರ್ತಿಕ್ ಮತ್ತು ವೆಂಕಟೇಶ್ ನಡುವೆ ನಿಕಟ ಸಂಬಂಧವಿದ್ದಿದ್ದು, ಕೆಲ ಮೂಲಗಳ ಪ್ರಕಾರ, ಕಾರ್ತಿಕ್ ಕೊಲೆಗೆ ವೆಂಕಟೇಶ್ ಸಹಕಾರಿಯಾಗಿದ್ದರೆಂಬ ಶಂಕೆ ಇದೆ.

ಈ ಹಿನ್ನೆಲೆಯಲ್ಲಿಯೇ ಕಾರ್ತಿಕ್‌ನ ಸಂಗಾತಿಗಳ ಗುಂಪು ವೆಂಕಟೇಶ್ ಮೇಲೆ ಪ್ರತೀಕಾರದಂತೆ ದಾಳಿ ನಡೆಸಿದೆಯೆಂಬುದು ಪೊಲೀಸರು ಭಾವಿಸುತ್ತಿದ್ದಾರೆ. ಪೊಲೀಸ್ ತನಿಖೆ ಚುರುಕು ಈ ಘಟನೆಯ ಸ್ಥಳಕ್ಕೆ ನಜರಬಾದ್ ಠಾಣೆಯ ಪೊಲೀಸರು ಭೇಟಿ ನೀಡಿ, ಸಾಕ್ಷ್ಯಗಳನ್ನು ಸಂಗ್ರಹಿಸಲು ಕಾರ್ಯಾಚರಣೆ ನಡೆಸುತ್ತಿದ್ದಾರೆ. ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್, ಡಿಸಿಪಿಗಳಾದ ಬಿಂದುರಾಣಿ ಮತ್ತು ಸುಂದರ್ ರಾಜರು ಕೂಡ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸುವ ಮೂಲಕ, ಆರೋಪಿಗಳ ಪತ್ತೆಗಾಗಿ ಬಲೆ ಬೀಸಲಾಗಿದ್ದು, ಕೊಲೆಗೆ ಖಚಿತ ಕಾರಣವನ್ನು ಕಂಡುಹಿಡಿಯಲು ತನಿಖೆಯನ್ನು ಚುರುಕುಗೊಳಿಸಲಾಗಿದೆ.

## ಕಾರು ರಿವರ್ಸ್ ವೇಳೆ ಚಕ್ರಕ್ಕೆ ಸಿಲುಕಿ ಹನ್ನೊಂದು ತಿಂಗಳ ಶಿಶು ದುರ್ಮರಣ

ಬೆಂಗಳೂರು: ಕಾಮಾಕ್ಷಿಪಾಳ್ಯ ಸಂಚಾರಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದ ಹೃದಯವಿದ್ರಾವಕ ಘಟನೆಯಲ್ಲಿ ಕೇವಲ ಹನ್ನೊಂದು ತಿಂಗಳ ಪುಟ್ಟ ಬಾಲಕನೊಬ್ಬ ಕಾರಿನ ಚಕ್ರಕ್ಕೆ ಸಿಲುಕಿ ಮೃತಪಟ್ಟಿದ್ದಾನೆ. ಈ ದುರ್ಘಟನೆಯಲ್ಲಿ ಸಾವನ್ನಪ್ಪಿದ ಮಗುವನ್ನು ಉಮರ್ ಫಾರೂಕ್ ಎಂದು ಗುರುತಿಸಲಾಗಿದೆ

ಪೊಲೀಸರ ಪ್ರಾಥಮಿಕ ತನಿಖೆಯ ಪ್ರಕಾರ, ಕಾಮಾಕ್ಷಿಪಾಳ್ಯ ಪ್ರದೇಶದಲ್ಲಿ ವಾಸಿಸುತ್ತಿರುವ ಸ್ವಾಮಿ ಎಂಬ ವ್ಯಕ್ತಿಯು ತಮ್ಮ ಮನೆಯನ್ನು ಹಾಗೂ ಅದರ ಭಾಗಗಳಲ್ಲಿ ನಿರ್ಮಿಸಿದ್ದ ನಾಲ್ಕೈದು ಮನೆಗಳನ್ನು ಬಾಡಿಗೆಗೆ ನೀಡಿದ್ದರು. ಇತ್ತೀಚೆಗೆ, ಕುಣಿಗಲ್ ಮೂಲದ ಅರ್ಥಾನ್ ಎಂಬವರು ತಮ್ಮ ಕುಟುಂಬ ಸಮೇತ ಕಳೆದ ವಾರದಿಂದಲೇ ಇವರಲ್ಲಿ ಒಂದು ಬಾಡಿಗೆ ಮನೆಯಲ್ಲಿ ವಾಸಿಸಲು ಬಂದು ನೆಲೆಸಿದ್ದರು. ಹೊಸ ಪರಿಸರದಲ್ಲಿ ಚುಟುಕು ಕಾಲ ಕಳೆದ ಈ ಕುಟುಂಬದ ಪುಟ್ಟ ಮಗು ಉಮರ್ ಫಾರೂಕ್, ಸಾಮಾನ್ಯ ದಿನದಂತೆ ಮನೆಯ ಹೊರಗೆ ಆಟವಾಡುತ್ತಿದ್ದಾಗ ದುರಂತ ಸಂಭವಿಸಿದೆ.

ಬೆಳಿಗ್ಗೆಯ ಸಮಯದಲ್ಲಿ ಮನೆ ಮಾಲೀಕ ಸ್ವಾಮಿ ತಮ್ಮ ಕಾರನ್ನು ರಿವರ್ಸ್ ಮಾಡಲು ಪ್ರಯತ್ನಿಸುತ್ತಿದ್ದರು. ಅದೇ ವೇಳೆಯಲ್ಲಿ ಮಗು ಕಾರಿನ ಹಿಂಭಾಗದಲ್ಲಿ ನಿಷ್ಕಪಟವಾಗಿ ಆಟವಾಡುತ್ತಿದ್ದುದನ್ನು ಮಾಲೀಕರು ಗಮನಿಸಿರಲಿಲ್ಲ.

ಪರಿಣಾಮವಾಗಿ ಕಾರು ಮಗುವಿನ ಮೇಲೆ ಹರಿದು, ಅದು ತೀವ್ರವಾಗಿ ಗಾಯಗೊಂಡಿದೆ. ಕಾರಿನ ಚಕ್ರ ಮಗುವಿನ ದೇಹದ ಮೇಲೆ ಹರಿದ ಪರಿಣಾಮ ಉಮರ್ ಸ್ಥಳದಲ್ಲಿಯೇ ಗಂಭೀರ ಸ್ಥಿತಿಗೆ ತಲುಪಿದ್ದ. ಘ ಟ ನೆ ಗಮನಿಸಿದ ಸ್ಥಳೀಯರು ಹಾಗೂ ಕುಟುಂಬದವರು ಮಗುವನ್ನು ತಕ್ಷಣವೇ ಸಮೀಪದ ಅನುಪಮಾ ಆಸ್ಪತ್ರೆಗೆ ಕರೆದೊಯ್ದರು. ಆದರೆ ವೈದ್ಯಕೀಯ ಚಿಕಿತ್ಸೆ ನೀಡುವಷ್ಟರಲ್ಲಿ ಮಗುವು ಮೃತಪಟ್ಟಿರುವುದಾಗಿ ವೈದ್ಯರು ದೃಢಪಡಿಸಿದರು.

ಈ ಸುದ್ದಿ ಕೇಳಿದ ಪೋಷಕರು ಆಘಾತದಿಂದ ಕಣ್ಣೀರು ಹಾಕಿದ್ದು, ತಮ್ಮ ಒಂದು ವರ್ಷದೊಳಗಿನ ಮಗುವಿನ ಸಾವಿನಿಂದ ಸಂಪೂರ್ಣವಾಗಿ ಶೋಕಸಾಗರದಲ್ಲಿ ಮುಳುಗಿದ್ದಾರೆ. ಹೊಸದಾಗಿ ಬಾಡಿಗೆ ಮನೆಗೆ ಬಂದು ಕೇವಲ ಕೆಲವೇ ದಿನಗಳಲ್ಲಿ ಇಂತಹ ದುರಂತ ಎದುರಾಗಿರುವುದು ಕುಟುಂಬದವರನ್ನು ಭಾರೀ ದುಃಖಕ್ಕೆ ದೂಡಿದೆ. ಘಟನೆ ಬಳಿಕ ಕಾಮಾಕ್ಷಿಪಾಳ್ಯ ಸಂಚಾರಿ ಪೊಲೀಸ್ ಠಾಣೆಯ ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದರು. ಮನೆ ಮಾಲೀಕ ಸ್ವಾಮಿಯನ್ನು ವಶಕ್ಕೆ ಪಡೆದು ವಿಚಾರಣೆ ಪ್ರಾರಂಭಿಸಲಾಗಿದೆ. ಪ್ರಾಥಮಿಕ ತನಿಖೆಯ ಪ್ರಕಾರ, ಸ್ವಾಮಿ ಕಾರನ್ನು ರಿವರ್ಸ್ ಮಾಡುವ ವೇಳೆ ಹಿಂಭಾಗವನ್ನು ಸರಿಯಾಗಿ ಪರಿಶೀಲಿಸದಿದ್ದುದೇ ಈ ದುರ್ಘಟನೆಯ ಮೂಲ ಕಾರಣವೆಂದು ಪೊಲೀಸರು ತಿಳಿಸಿದ್ದಾರೆ.

ಪೊಲೀಸರು ಮುಂದಿನ ಕ್ರಮವಾಗಿ ಕಾರನ್ನು ವಶಕ್ಕೆ ಪಡೆದುಕೊಂಡಿದ್ದು, ಪ್ರಕರಣವನ್ನು ನಿರ್ಲಕ್ಷ್ಯದಿಂದಾಗಿ ಸಾವಿಗೆ ಕಾರಣವಾದ ಅಪಘಾತ (IPC ಸೆಕ್ಷನ್ 304A) ಅಡಿಯಲ್ಲಿ ದಾಖಲಿಸಿದ್ದಾರೆ. ಈ ಘಟನೆಯು ಸ್ಥಳೀಯ ಪ್ರದೇಶದಲ್ಲಿ ಭಾರೀ ದುಃಖ ಮತ್ತು ವಿಷಾದವನ್ನು ಉಂಟುಮಾಡಿದ್ದು, ನೆರೆಮಾವಿನವರು ಪೋಷಕರಿಗೆ ಸಾಂತ್ವನ ಹೇಳಿದ್ದಾರೆ. ಈ ಘಟನೆ ಮತ್ತೆ ಒಂದು ಬಾರಿ ಸುರಕ್ಷತಾ ಜಾಗೃತಿಯ ಕೊರತೆ ಎಷ್ಟು ದುಃಖಕರ ಪರಿಣಾಮ ತರುತ್ತದೆ ಎಂಬುದಕ್ಕೆ ಕಹಿ ಉದಾಹರಣೆಯಾಗಿದೆ.

## ರಾಜ್ಯದ ಎಲ್ಲಾ ಶಾಲೆಗಳಿಗೆ ಅ.18 ರವರೆಗೆ ದಸರಾ ರಜೆ ವಿಸ್ತರಣೆ: ಸಿಎಂ



**ಬೆಂಗಳೂರು**:ಕರ್ನಾಟಕ ಸರ್ಕಾರವು ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಿಗೆ ದಸರಾ ರಜೆಯನ್ನು ಅಕ್ಟೋಬರ್ 18, 2025 ರವರೆಗೆ ವಿಸ್ತರಿಸಲು ನಿರ್ಧರಿಸಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದ್ದಾರೆ. ಈ ನಿರ್ಧಾರವನ್ನು ಬಿಡುಗಡೆ ಮಾಡುವ ಮೂಲಕ, ಸರ್ಕಾರ ಶಾಲಾ ಶಿಕ್ಷಕರನ್ನು ರಾಜ್ಯಾದ್ಯಂತ ನಡೆಯುತ್ತಿರುವ ಜಾತಿಗಣತಿ ಸಮೀಕ್ಷೆಯಲ್ಲಿ ಸಂಪೂರ್ಣವಾಗಿ ಭಾಗವಹಿಸಲು ಪ್ರೋತ್ಸಾಹಿಸುತ್ತಿದೆ.

ಚುನಾವಣೆ ಅಥವಾ ಯಾವುದೇ ಶೈಕ್ಷಣಿಕ ಕಾರಣವಲ್ಲ, ಈ ರಜೆ ವಿಸ್ತರಣೆ ಹಿನ್ನಲೆಯಲ್ಲಿ ಮುಖ್ಯ ಕಾರಣವೆಂದರೆ ರಾಜ್ಯದ ಹಲವು ಜಿಲ್ಲೆಗಳಲ್ಲಿ ಜಾತಿಗಣತಿ ಸಮೀಕ್ಷೆ ಇನ್ನೂ ಪೂರ್ಣಗೊಂಡಿಲ್ಲ ಎಂಬುದು. ಸಂಪೂರ್ಣ ಸಮೀಕ್ಷೆಯನ್ನು ಸಮರ್ಪಕವಾಗಿ ನೆರವೇರಿಸಲು ಶಿಕ್ಷಕರ ಸಂಪೂರ್ಣ ಸಹಕಾರ ಅತ್ಯಾವಶ್ಯಕವಾಗಿದೆ ಎಂದು ಸಿಎಂ ಸಿದ್ದರಾಮಯ್ಯ ವಿವರಿಸಿದ್ದಾರೆ.

ಇಂದು ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, "ಕೊಪ್ಪಳ ಜಿಲ್ಲೆಯಲ್ಲಿ ಜಾತಿಗಣತಿ ಸಮೀಕ್ಷೆ ಶೇಕಡಾ 90ರಷ್ಟು ಪೂರ್ಣಗೊಂಡಿದೆ. ಆದರೆ, ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಇದಕ್ಕೆ ಕೇವಲ ಶೇಕಡಾ 68-69ರಷ್ಟು ಮಾತ್ರ ಪೂರ್ಣವಾಗಿದೆ. ರಾಜ್ಯಾದ್ಯಂತ ಸಂಪೂರ್ಣ ಸಮೀಕ್ಷಾ ವರದಿ ಇಂದು ಸಂಜೆ ಒಳಗೆ ಲಭ್ಯವಾಗಲಿದೆ," ಎಂದು ತಿಳಿಸಿದ್ದಾರೆ. "ಜಾತಿಗಣತಿ ಸಮೀಕ್ಷೆಯಂತಹ ಮಹತ್ವದ ಕಾರ್ಯದಲ್ಲಿ ಶಿಕ್ಷಕರ ಪಾಲ್ಗೊಳ್ಳುವಿಕೆ ಅನಿವಾರ್ಯ. ಅವರು ಸಂಪೂರ್ಣ ಶ್ರಮದಿಂದ ಈ ಸಮೀಕ್ಷೆಯನ್ನು ಪೂರ್ಣಗೊಳಿಸಲು ಸಹಕರಿಸುವುದರಿಂದ, ಸಮಗ್ರ ಮಾಹಿತಿಯನ್ನು ಸರ್ಕಾರ ಪಡೆಯಬಹುದು ಮತ್ತು ಅದರ ಆಧಾರದ ಮೇಲೆ ಸರಿಯಾದ ಯೋಜನೆ ರೂಪಿಸಬಹುದು. ಈ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಶಾಲೆಗಳಿಗೆ ಅಕ್ಟೋಬರ್ 18 ರವರೆಗೆ ದಸರಾ ರಜೆಯನ್ನು ಘೋಷಿಸಲಾಗಿದೆ."

ಈನಿರ್ಧಾರಕ್ಕೆ ಅನುಗುಣವಾಗಿ, ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ಪಠ್ಯಕ್ರಮ ಹಾಗೂ ಶಾಲಾ ಕಾರ್ಯಕ್ರಮಗಳ ಪ್ರಗತಿ ಕೆಲವು ದಿನಗಳವರೆಗೆ ತಾತ್ಕಾಲಿಕವಾಗಿ ನಿಲ್ಲಿಸಬಾರದು. ಶಿಕ್ಷಕರು ಸಮೀಕ್ಷೆಯಲ್ಲಿ ಪಾಲ್ಗೊಳ್ಳುವ ಮೂಲಕ, ರಾಜ್ಯ ಸರ್ಕಾರಕ್ಕೆ ಜನಸಂಖ್ಯೆಯ ಸಮಗ್ರ ಹಾಗೂ ನಿಖರ ಮಾಹಿತಿಯನ್ನು ಒದಗಿಸಲು ಸಹಾಯ ಮಾಡುತ್ತಿದ್ದಾರೆ. ಇದರಿಂದ, ಅಕ್ಟೋಬರ್ 18 ರವರೆಗೆ ಶಾಲಾ ಮಕ್ಕಳು ರಜೆಯಲ್ಲಿರುವಾಗ, ಶಿಕ್ಷಕರು ಜಾತಿಗಣತಿ ಸಮೀಕ್ಷೆಯಲ್ಲಿ ನೇರವಾಗಿ ಭಾಗವಹಿಸುತ್ತಿರುವುದು, ರಾಜ್ಯದ ಶೈಕ್ಷಣಿಕ ವ್ಯವಸ್ಥೆ ಮತ್ತು ಸಮೀಕ್ಷಾ ಕಾರ್ಯದ ಸಮಗ್ರತೆಯನ್ನು ಖಚಿತಪಡಿಸುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ರೊಮ್ಯಾಂಟಿಕ್ ಥ್ರಿಲ್ಲರ್ 'ಏಳುಮಲೆ' ಒಟಿಟಿಗೆ ಎಂಟ್ರಿ? ಯಾವಾಗ ಎಲ್ಲಿ ಸ್ಟ್ರೀಮಿಂಗ್?

ಭಾರತದ ಅತಿದೊಡ್ಡ ಸ್ವದೇಶಿ OTT ಪ್ಲಾಟ್‌ಫಾರ್ಮ್ zee5ನಲ್ಲಿ ಅಕ್ಟೋಬರ್ 17 ರಿಂದ ಬಹುನಿರೀಕ್ಷಿತ ರೊಮ್ಯಾಂಟಿಕ್ ಥ್ರಿಲ್ಲರ್ 'ಏಳುಮಲೆ' ಸಿನಿಮಾ ಸ್ಟ್ರೀಮಿಂಗ್ ಆಗಲಿದೆ. ಪುನೀತ್ ರಂಗಸ್ವಾಮಿ ನಿರ್ದೇಶನದ ಈ ಚಿತ್ರಕ್ಕೆ ತರುಣ್ ಸುಧೀರ್ ಮತ್ತು ಅಟ್ಲಾಂಟಾ ನಾಗೇಂದ್ರ ನಿರ್ಮಿಸಿದ್ದಾರೆ. ರಾಣಾ ನಾಯಕನಾಗಿ, ಪ್ರಿಯಾಂಕಾ ಆಚಾರ್ ನಾಯಕಿಯಾಗಿ ಅಭಿನಯಿಸಿದ್ದು, ಜಗಪತಿ ಬಾಬು, ಕಿಶೋರ್ ಮತ್ತು ಟಿಎಸ್ ನಾಗಾಭರಣ ಸೇರಿದಂತೆ ಪ್ರತಿಭಾನ್ವಿತ ತಾರಾಗಣ ಚಿತ್ರದಲ್ಲಿದೆ. ಕರ್ನಾಟಕ ಮತ್ತು ತಮಿಳುನಾಡು ಗಡಿಭಾಗದಲ್ಲಿ ನಡೆಯುವ ಪ್ರೇಮಕಥೆ ಇದಾಗಿದೆ. ಮೈಸೂರಿನ ಅನಾಥ ಹುಡುಗನಾಗಿ ರಾಣಾ ನಟಿಸಿದ್ದಾರೆ. ಮೈಸೂರಿನಲ್ಲಿ ಓದಲು ಬಂದ ತಮಿಳುನಾಡಿನ ಶ್ರೀಮಂತ ಕುಟುಂಬದ ಹುಡುಗಿ ರೇವತಿಯಾಗಿ ಪ್ರಿಯಾಂಕಾ ಅಭಿನಯಿಸಿದ್ದಾರೆ. ಇವರಿಬ್ಬರ ಪ್ರೇಮಕಥೆಯನ್ನು ಏಳುಮಲೆ ಮೂಲಕ ಸೊಗಸಾಗಿ ಕಟ್ಟಿಕೊಡಲಾಗಿದೆ.

Zee5ನಲ್ಲಿ ಏಳುಮಲೆ ಸಿನಿಮಾ ಸ್ಟ್ರೀಮಿಂಗ್ ಆಗುತ್ತಿರುವ ಬಗ್ಗೆ ಮಾಹಿತಿ ಹಂಚಿಕೊಂಡ ನಟ ರಾಣಾ, ಹರೀಶ್ ತುಂಬಾ ಸರಳ. ಪಕ್ಕದ ಮನೆಯ ಹುಡುಗನ ಪಾತ್ರ. ಅವನ ಪಾತ್ರ ನಿರ್ವಹಿಸುವುದು ನನಗೆ ತುಂಬಾ ವೈಯಕ್ತಿಕವೆನಿಸಿದ ಪ್ರಯಾಣವಾಗಿತ್ತು. ಸ್ಥಳೀಯ ಭಾಷೆಯಲ್ಲಿ ಕೆಲಸ ಮಾಡುವುದರಿಂದ ಹಿಡಿದು ಅವನ ಹಿನ್ನೆಲೆಯನ್ನು ಅರ್ಥಮಾಡಿಕೊಳ್ಳುವವರೆಗೆ, ಪ್ರಕ್ರಿಯೆಯು ಸವಾಲಿನ ಮತ್ತು ಪ್ರತಿಫಲ ದಾಯಕವಾಗಿತ್ತು. ಏಲುಮಲೆ ಸಿನಿಮಾವನ್ನು ಬಹಳ ಪ್ರೀತಿಯಿಂದ ಮಾಡಲಾಗಿದೆ. ಈಗ, ಅದರ ಡಿಜಿಟಲ್ ಪ್ರೀಮಿಯರ್‌ನೊಂದಿಗೆ, ಇನ್ನೂ ಹೆಚ್ಚಿನ ಪ್ರೇಕ್ಷಕರು ಹರೀಶ್ ಅವರ ಕಥೆಯೊಂದಿಗೆ ಸಂಪರ್ಕ ಸಾಧಿಸುತ್ತಾರೆ ಎಂದು ನಾನು ಭಾವಿಸುತ್ತೇನೆ. ಈ ಪಾತ್ರವು zee5 ನ ವೀಕ್ಷಕರೊಂದಿಗೆ ಉಳಿದರೆ, ನಾನು ಪಾತ್ರಕ್ಕೆ ನ್ಯಾಯ ಸಲ್ಲಿಸಿದ್ದೇನೆ ಎಂದು ನನಗೆ ಅನಿಸುತ್ತದೆ" ಎಂದರು.




## ಬೆಂಗಳೂರು: ಪೊಲೀಸ್ ಮೇಲೆ ಚಿನ್ನ ಕಳ್ಳತನದ ಆರೋಪ




**ಬೆಂಗಳೂರು:** ಕಳ್ಳತನ ಪ್ರಕರಣದ ತನಿಖೆಯ ವೇಳೆ ಆರೋಪಿಗಳಿಂದ ವಶಪಡಿಸಿಕೊಂಡಿದ್ದ ಸುಮಾರು 2 ಕಿಲೋ ಚಿನ್ನವನ್ನು ವಾರಸುದಾರರಿಗೆ ಹಿಂತಿರುಗಿಸದೇ, ಅದರ ಒಂದು ಭಾಗವನ್ನು ಪೊಲೀಸ್ ಅಧಿಕಾರಿಗಳು ತಮ್ಮೊಳಗೇ ಹಂಚಿಕೊಂಡಿದ್ದಾರೆ ಎಂಬ ಗಂಭೀರ ಆರೋಪ ಇದೀಗ ಬೆಳಕಿಗೆ ಬಂದಿದೆ. ಈ ಸಂಬಂಧ ಸೂರ್ಯನಗರ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಸಂಜೀವ್ ಕುಮಾರ್ ಮಹಾಜನ್ ಹಾಗೂ ಅವರ ಸಿಬ್ಬಂದಿ ವಿರುದ್ಧ ಅಧಿಕೃತ ದೂರು ದಾಖಲಾಗಿದೆ.

ಈ ಕುರಿತು ವಕೀಲ ಹಾಗೂ ಸಾಮಾಜಿಕ ಕಾರ್ಯಕರ್ತ ವೆಂಕಟಾಚಲಪತಿ ಅವರು ಕೇಂದ್ರ ವಲಯ ಐಜಿಪಿ ಲಾಬೂರಾಮ್ ಅವರಿಗೆ ನೀಡಿದ ಲಿಖಿತ ದೂರು ಆಧರಿಸಿ, ಪ್ರಕರಣದ ತನಿಖೆಗಾಗಿ ಹೆಚ್ಚುವರಿ ಎಸ್ಪಿ ನೇತೃತ್ವದ ತನಿಖಾ ತಂಡ ರಚಿಸಲಾಗಿದೆ. ತನಿಖೆಯು ಪ್ರಾರಂಭಗೊಂಡಿದ್ದು, ಇಲಾಖೆಯ ಒಳಗೆಯೇ ಆಘಾತ ಮೂಡಿಸಿದೆ. ಮೂಲ ಮಾಹಿತಿ ಪ್ರಕಾರ, ಸೂರ್ಯನಗರ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಕಳೆದ ಕೆಲವು ತಿಂಗಳಲ್ಲಿ ತಮಿಳುನಾಡು ಮೂಲದ ಕುಖ್ಯಾತ ಸುಧಾಕರನ್ ಹಾಗೂ ಅವನ ಸಹಚರರು ಸೇರಿ ಸುಮಾರು 10ಕ್ಕೂ ಹೆಚ್ಚು ಮನೆಗಳಲ್ಲಿ ಕಳ್ಳತನಗಳನ್ನು ಎಸಗಿದ್ದರು. ಈ ಕಳ್ಳತನ ಪ್ರಕರಣಗಳ ತನಿಖೆಯನ್ನು ಮುನ್ನಡೆಸುತ್ತಿದ್ದ ಇನ್ಸ್‌ಪೆಕ್ಟರ್ ಸಂಜೀವ್ ಕುಮಾರ್ ಮಹಾಜನ್ ನೇತೃತ್ವದ ತಂಡವು ಆರೋಪಿಗಳನ್ನು ಬಂಧಿಸಿ, ಅವರ ವಶದಿಂದ ಸುಮಾರು 2 ಕಿಲೋ ಚಿನ್ನ ವಶಪಡಿಸಿಕೊಂಡಿತ್ತು.

ಆದರೆ, ಆ ಚಿನ್ನವನ್ನು ಸರಕಾರಕ್ಕೆ ಹಾಗೂ ಕಳೆದುಕೊಂಡವರಿಗೆ ಹಿಂದಿರುಗಿಸುವ ಸಂದರ್ಭದಲ್ಲಿ ಕೇವಲ 200 ಗ್ರಾಂ ಚಿನ್ನವನ್ನು ಮಾತ್ರ ದಾಖಲೆ ಪ್ರಕಾರ ತೋರಿಸಿ ಹಸ್ತಾಂತರಿಸಲಾಗಿದೆ. ಉಳಿದ ಸುಮಾರು 1.8 ಕಿಲೋ ಚಿನ್ನದ ಲೆಕ್ಕ ಸ್ಪಷ್ಟವಾಗಿಲ್ಲ ಎಂಬುದೇ ದೂರುದಾರರ ಗಂಭೀರ ಆರೋಪ. ವೆಂಕಟಾಚಲಪತಿ ಅವರ ಪ್ರಕಾರ, ಇನ್ಸ್‌ಪೆಕ್ಟರ್ ಹಾಗೂ ಅವರ ಸಿಬ್ಬಂದಿ ವಶಪಡಿಸಿಕೊಂಡ ಚಿನ್ನದ ಒಂದು ಭಾಗವನ್ನು ಅಕ್ರಮವಾಗಿ ತಮ್ಮೊಳಗೇ ಹಂಚಿಕೊಂಡಿದ್ದಾರೆ ಎಂಬ ವಿಶ್ವಾಸಾರ್ಹ ಮಾಹಿತಿ ದೊರೆತಿದ್ದು, ಈ ಕುರಿತು ತನಿಖೆ ನಡೆಸದಿದ್ದರೆ ಇದು ಭ್ರಷ್ಟಾಚಾರದ ದೊಡ್ಡ ಮಾದರಿಯೇ ಆಗಬಹುದು ಎಂದು ಹೇಳಿದ್ದಾರೆ.

ದೂರು ಸ್ವೀಕರಿಸಿದ ನಂತರ ಐಜಿಪಿ ಲಾಬೂರಾಮ್ ಅವರು ಪ್ರಕರಣದ ಗಂಭೀರತೆಯನ್ನು ಪರಿಗಣಿಸಿ, ಹೆಚ್ಚುವರಿ ಎಸ್ಪಿ ಅವರ ನೇತೃತ್ವದಲ್ಲಿ ಪ್ರಾಥಮಿಕ ತನಿಖೆ ನಡೆಸಲು ಸೂಚನೆ ನೀಡಿದ್ದಾರೆ. ಪ್ರಸ್ತುತ ಸಂಬಂಧಿತ ದಾಖಲೆಗಳು, ವಶಪಡಿಸಿಕೊಳ್ಳಲಾದ ಚಿನ್ನದ ಪ್ರಮಾಣ ಮತ್ತು ದಾಖಲೆ ಪುಸ್ತಕಗಳ ಪರಿಶೀಲನೆ ನಡೆಯುತ್ತಿದೆ. ಘಟನೆಯು ಪೊಲೀಸರ ವಿರುದ್ಧ ಸಾರ್ವಜನಿಕ ವಿಶ್ವಾಸಕ್ಕೆ ಧಕ್ಕೆಯುಂಟುಮಾಡಿದ್ದು, ಇಲಾಖೆಯ ಒಳಗಿನ ಅಕ್ರಮ ವ್ಯವಹಾರಗಳ ಕುರಿತು ಹೊಸ ಚರ್ಚೆ ಹುಟ್ಟಿಸಿದೆ. ಸ್ಥಳೀಯರು ಮತ್ತು ಸಾಮಾಜಿಕ ಕಾರ್ಯಕರ್ತರು ಆರೋಪಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸುತ್ತಿದ್ದಾರೆ.

## ಗಂಡನ ತಲೆಯ ಮೇಲೆ ಬಿಸಿ ಅಡುಗೆ ಎಣ್ಣೆ ಸುರಿಸಿ ಕೊಲೆ ಯತ್ನ



ಬೆಳಗಾವಿ: ಬೆಳಗಾವಿ ತಾಲೂಕಿನ ಮಚ್ಚೆ ಗ್ರಾಮದ ರಾಮನಗರದಲ್ಲಿ ಭೀಕರವಾದ ಕುಟುಂಬೀಯ ಘಟನೆ ನಡೆದಿದೆ. ಪತಿಯ ಮೇಲೆ ಸಂಶಯ ಹತ್ತಿಸಿ ಪತ್ನಿ ವೈಶಾಲಿ ಪಾಟೀಲ್ (48) ಅವರು ತಮ್ಮ ಪತಿಯ ಸುಭಾಷ್ ಪಾಟೀಲ್ (55) ಮೇಲೆ ಕುದಿಸಿದ ಅಡುಗೆ ಎಣ್ಣೆ ಸುರಿಸಿದ್ದು, ಈ ಕಾರಣದಿಂದ ಪತಿ ಗಂಭೀರವಾಗಿ ಸುಟ್ಟುಹೋಗಿದ್ದಾರೆ. ಸ್ಥಳೀಯ ಆಸ್ಪತ್ರೆಗೆ ದಾಖಲಾಗಿರುವ ಸುಭಾಷ್ ಸಾವು-ಬದುಕಿನ ನಡುವೆ ಹೋರಾಡುತ್ತಿದ್ದಾರೆ.

ಈ ಘಟನೆ ಬೆಳಗಾವಿ ಗ್ರಾಮೀಣ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಸಂಭವಿಸಿರುವುದು ತಿಳಿದುಬಂದಿದ್ದು, ಪೊಲೀಸರು ತಕ್ಷಣವೇ ಪ್ರಕರಣ ದಾಖಲಿಸಿಕೊಂಡು ಪರಿಶೀಲನೆ ಆರಂಭಿಸಿದ್ದಾರೆ.

ಘಟನೆಯ ಹಿನ್ನೆಲೆ ಸುಭಾಷ್ ಪಾಟೀಲ್ ಸಿಲಿಂಡರ್ ವಿತರಣೆಯ ಕೆಲಸ ಮಾಡುತ್ತಿದ್ದರು. ದಿನನಿತ್ಯದ ಕೆಲಸ ಮುಗಿಸಿ ಮನೆಗೆ ಬಂದ ನಂತರ ರಾತ್ರಿಯ ಊಟಕ್ಕೆ ಕುಳಿತಿದ್ದಾಗ ಈ ದಾರಣ ಘಟನೆಯು ಸಂಭವಿಸಿದೆ. ವೈಶಾಲಿ ಪಾಟೀಲ್ ತಮ್ಮ ಪತಿಯ ಮೇಲೆ ಬೇರೆ ಮಹಿಳೆಯೊಂದಿಗೆ ಅನ್ಯೆತಿಕ ಸಂಬಂಧವಿದ್ದೆ ಎಂಬ ಭಾವನೆಯಿಂದ ಶಂಕೆಗೊಳ್ಳುತ್ತಿದ್ದರು. ಈ ಶಂಕೆಯು ಹಲವಾರು ವರ್ಷಗಳಿಂದ ದಂಪತಿಗಳ ನಡುವೆ ಕಾಲಕಾಲಕ್ಕೆ ಉಂಟಾಗುತ್ತಿದ್ದ ಕಲಹವನ್ನು ಹೆಚ್ಚಿಸುತ್ತಿತ್ತು.

ಆ ದಿನ, ವೈಶಾಲಿಯ ಕೋಪ ತೀವ್ರಗೊಂಡು, ಅವರು ಏಕಾಏಕಿ ಕಾದಿರುವ ಬಿಸಿ ಅಡುಗೆ ಎಣ್ಣೆಯನ್ನು ಸುಭಾಷ್ ಪಾಟೀಲರ ತಲೆಯ ಮೇಲೆ ಸುರಿಸಿದರು. ಪರಿಣಾಮವಾಗಿ ಪತಿ ತೀವ್ರ ಸುಟ್ಟುಹೋದರು. ತಕ್ಷಣ ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದ್ದು, ವೈದ್ಯರು ಅವರ ಸ್ಥಿತಿ ಗಂಭೀರವಾಗಿದೆ ಎಂದು ತಿಳಿಸಿದ್ದಾರೆ. ಪೊಲೀಸರು ನೀಡಿದ ಮಾಹಿತಿಯ ಪ್ರಕಾರ, ದೀರ್ಘಕಾಲದಿಂದ ಸುಭಾಷ್ ಮತ್ತು ವೈಶಾಲಿ ಪಾಟೀಲರ ನಡುವಿನಸಂಸಾರದಲ್ಲಿ ಭಿನ್ನಾಭಿಪ್ರಾಯಗಳು ಇದ್ದವು. ಪತಿಯ ಕೆಲಸದ ಸ್ವಭಾವದಿಂದ, ಅವರು ಹೊರಗಡೆ ಜನರೊಂದಿಗೆ ಸಂಪರ್ಕ ಹೊಂದಿದ ಕಾರಣ ವೈಶಾಲಿಯ ಶಂಕೆ ಹೆಚ್ಚಳವಾಗಿತ್ತು. ಪೊಲೀಸ್ ತನಿಖೆಯಲ್ಲಿ, ವೈಶಾಲಿಯ ಈ ಕ್ರಿಯೆ ಕೇವಲ ತೀವ್ರ ಕೋಪದಿಂದ ಆಗಿದೆಯೇ ಅಥವಾ ಪೂರ್ವನಿಯೋಜಿತ ಕೊಲೆ ಯತ್ನವೆಂಬುದೇ ಎಂಬುದು ಪರಿಶೀಲನೆಗೆ ಒಳಪಡಲಿದೆ.

ಸದ್ಯ, ವೈಶಾಲಿಯನ್ನು ಪೊಲೀಸರು ವಶಕ್ಕೆ ಪಡೆದು, ಅವರ ಮೇಲೆ ಕೊಲೆ ಯತ್ನ ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರೆಸುತ್ತಿದ್ದಾರೆ.

## ಕುರುಬರನ್ನು ಎಸ್‌ಟಿಗೆ ಸೇರಿಸಿದಲ್ಲಿ ಮೀಸಲಾತಿ ಪ್ರಮಾಣವೃದ್ಧಿ ಅಗತ್ಯ:ಸಿಎಂ

ಬೆಂಗಳೂರು:ಕುರು ಸಮುದಾಯವನ್ನುನೇಮಕಾತಮೀಸಲಾತಿ ವ್ಯಾಪ್ತಿಯಲ್ಲಿನ ST ಸಮುದಾಯಕ್ಕೆ ಸೇರಿಸುವ ಬಗ್ಗೆ ಉಂಟಾದ ಚರ್ಚೆಯ ಮಧ್ಯೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟ ಪ್ರತಿಕ್ರಿಯೆ ನೀಡಿದ್ದಾರೆ. ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಸಿಎಂ, "ಕುರುಬರನ್ನು STಗೆ ಸೇರಿಸಿದರೆ ST ಮೀಸಲಾತಿ ಪ್ರಮಾಣ ಹೆಚ್ಚಾಗಬೇಕು. ಯಾರೂ ಯಾರ ಅನ್ನದ ತಟ್ಟೆಗೆ ಕೈ ಹಾಕಬಾರದು, ಯಾರೂ ಯಾರ ಅವಕಾಶಗಳನ್ನೂ ಕಿತ್ತುಕೊಳ್ಳಬಾರದು" ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಮಾಜಿ ಸಂಸದ ಉಗ್ರಪ್ಪ ಅವರು ವೇದಿಕೆ ಮೇಲೆ ಮಾತನಾಡಿ, ST ಸಮುದಾಯಕ್ಕೆ ಕುರುಬರನ್ನು ಸೇರಿಸುವಾಗ ಅವರ ತಮ್ಮ ಹಕ್ಕು ಮತ್ತು ತಟ್ಟೆ ಉಳಿಯಬೇಕು. "ಮೀಸಲಾತಿ ಪ್ರಮಾಣ ಹೆಚ್ಚಿಸದೆ ಸೇರಿಸುವುದಾದರೆ ನಾವು ಹೋರಾಟಕ್ಕೆ ಮುಂದಾಗುತ್ತೇವೆ" ಎಂದು ಅವರು ಎಚ್ಚರಿಕೆ ನೀಡಿದರು. ಸಿದ್ದರಾಮಯ್ಯ ಸ್ಪಷ್ಟ ಪಡಿಸಿದ್ದು, "ಕುರುಬರನ್ನು STಗೆ ಸೇರಿಸಲು ಕೇಂದ್ರಕ್ಕೆ ಬೊಮ್ಮಾಯಿ ಸರ್ಕಾರ ಶಿಫಾರಸು ನೀಡಿದ್ದು, ಈಗ ಕೇಂದ್ರವು ಕೆಲವು ಸ್ಪಷ್ಟನೆಗಳನ್ನು ಕೇಳಿದೆ. ಇದು ನಮ್ಮ ಮುಂದಿನ ಕಾರ್ಯಕ್ಷೇತ್ರ. ನನ್ನ ಬೆಂಬಲ ಮತ್ತು ಸಹಮತ ಇದಕ್ಕೆ ಸ್ಪಷ್ಟವಾಗಿದೆ" ಎಂದು ಹೇಳಿದರು. ಸಿಎಂ ಹೇಳಿಕೆಯು ರಾಜ್ಯದ ರಾಜಕೀಯ ಹಂಗಾಮಿ ಪರಿಸ್ಥಿತಿಯಲ್ಲಿ ಕುರುಬ ಸಮುದಾಯ ಮತ್ತು ST ಸಮುದಾಯ ನಡುವೆ ಸಮನ್ವಯತೆಯನ್ನು ಕಾಪಾಡುವ ಪ್ರಯತ್ನವಾಗಿದೆ ಎಂಬ ವಿಶ್ಲೇಷಣೆ ಎದುರಾಗಿದೆ.


## ಪತ್ನಿಗೆ ಮೆಸೇಜ್ ಮಾಡುತ್ತಿದ್ದ ಸ್ನೇಹಿತನ ಕತ್ತು ಕೊಯ್ದು ಬರ್ಬರ ಹತ್ಯೆ

**ಬೆಂ ಗ ಳೂ ರು :** ನ ಗ ರ ದ ಕೊಡುಗೇಹಳ್ಳಿ ಮರಿಯಪ್ಪನ ಪಾಳ್ಯದಲ್ಲಿ ಭೀಕರ ಹತ್ಯೆಯ ಘಟನೆ ನಡೆದಿದೆ. ಜಾರ್ಖಂಡ್ ಮೂಲದ ರಾಘು ಎಂಬ ವ್ಯಕ್ತಿಯನ್ನು, ತಮ್ಮ ಸ್ನೇಹಿತ ರಾಜು ಬರ್ಬರವಾಗಿ ಕತ್ತಿನಿಂದ ಕೊಯ್ದು ಹತ್ಯೆ ಮಾಡಿದ್ದಾರೆ. ಇಬ್ಬರೂ ಆರೋಪಿಗಳು ಎರಡು ವರ್ಷಗಳ ಹಿಂದೆ ಬೆಂಗಳೂರಿಗೆ ಕೆಲಸದ ಹುಡುಕಾಟಕ್ಕಾಗಿ ಬಂದಿದ್ದರು. ಪೊಲೀಸ್ ತನಿಖೆಯ ವಿವರಗಳ ಪ್ರಕಾರ, ಹತ್ಯೆಗೆ ಕಾರಣ ರಾಘು ತನ್ನ ಸ್ನೇಹಿತನ ಪತ್ನಿ ಮೇಲೆ ಕಣ್ಣು ಹಾಕಿ, ಅವರಿಗೆ ಮೆಸೇಜ್‌ಗಳನ್ನು ಕಳುಹಿಸುತ್ತಿದ್ದುದಾಗಿದೆ. ಈ ವಿಚಾರವನ್ನು ತಿಳಿದ ರಾಜು ತನ್ನ ಸ್ನೇಹಿತ ರಾಘುವಿಗೆ ಎಚ್ಚರಿಕೆ ನೀಡಿದರೂ, ರಾಘು ಹಳೆಯ ಚಾಳಿಯನ್ನು ಬಿಟ್ಟಿಲ್ಲ. ಹೀಗಾಗಿ, ಸೋಮವಾರ (ಅಕ್ಟೋಬರ್ 6) ರಾತ್ರಿ ರಾಜು ಮತ್ತು ರಾಘು ನಡುವೆ ಗಲಾಟೆ ಸಂಭವಿಸಿ, ರಾಜು ಕೋಪದಲ್ಲಿ ಕತ್ತನ್ನು ಬಳಸಿ ರಾಘುವನ್ನು ಬರ್ಬರವಾಗಿ ಹತ್ಯೆ ಮಾಡಿದ್ದಾರೆ.

ಹತ್ಯೆಗಾಗಿ ಉಪಕ್ರಮ ಮಾಡಿದ ರಾಜು ಪ್ರಕರಣದ ನಂತರ ತಕ್ಷಣ ಜಾರ್ಖಂಡ್‌ಗೆ ತೆರಳಲು ಯೋಚಿಸಿದ್ದನು. ರಾಜು ಬೈಯ್ಯಪನಹಳ್ಳಿ ರೈಲು ನಿಲ್ದಾಣಕ್ಕೆ ತೆರಳಿ ರೈಲು ಪ್ರಯಾಣಕ್ಕೆ ಸಿದ್ಧರಾಗಿದ್ದ ಸಂದರ್ಭದಲ್ಲಿ ಪೊಲೀಸರು ಮಾಹಿತಿ ಪಡೆದರು. ಸ್ಥಳದಲ್ಲಿ ಪರಿಶೀಲನೆ ನಡೆಸಿದಾಗ, ರಾಜುವಿನ ಕೈವಾಡದ ಬಗ್ಗೆ ಅನುಮಾನ ವ್ಯಕ್ತವಾಯಿತು. ತಕ್ಷಣ ಪೊಲೀಸರು ಹುಡುಕಾಟವನ್ನು ಆರಂಭಿಸಿ, ರೈಲು ನಿಲ್ದಾಣದಲ್ಲಿ ರಾಜುವನ್ನು ಪತ್ತೆಹಚ್ಚಿ ಬಂಧಿಸಿದ್ದಾರೆ.

ಪೊಲೀಸರು ಆರೋಪಿಯನ್ನು ಬಂಧಿಸಿ ವಿಚಾರಣೆ ನಡೆಸುತ್ತಿದ್ದಾರೆ ಮತ್ತು ಹತ್ಯೆಯ ಹಿನ್ನೆಲೆ ಮತ್ತು ಗಂಭೀರತೆ ಕುರಿತು ಇನ್ನಷ್ಟು ವಿವರಗಳನ್ನು ಪಡೆದುಕೊಳ್ಳುತ್ತಿದ್ದಾರೆ. ಸ್ಥಳೀಯರು ಹಾಗೂ ಪೊಲೀಸ್ ಅಧಿಕಾರಿಗಳು ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸುತ್ತಿದ್ದು, ಇಂತಹ ಘಟನೆ ಪುನರಾವೃತ್ತಿ ನಡೆಯದಂತೆ ತಕ್ಷಣ ಕ್ರಮ ಕೈಗೊಳ್ಳುತ್ತಿದ್ದಾರೆ.

## ತಾ.ಪಂ.ಮಾಜಿ ಸದಸ್ಯ ಅಲಂಬಾಡಿ ಕಾವಲು ಸಂಜೀವಪ್ಪ ನಿಧನ



ಕೆ.ಆರ್ ಪೇಟೆ: ತಾಲ್ಲೂಕಿನ ಅಕ್ಕಿಹೆಬ್ಬಾಳು ಹೋಬಳಿ ಆಲಂಬಾಡಿಕಾವಲು ಗ್ರಾಮದ ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯರಾದ ಶ್ರೀ ಎ.ಎನ್.ಸಂಜೀವಪ್ಪ (64) ರವರು ಇಂದು ಅನಾರೋಗ್ಯದಿಂದ ಮೈಸೂರಿನ ಬಿ.ಜಿ.ಎಸ್ ಅಪೋಲೋ ಆಸ್ಪತ್ರೆಯಲ್ಲಿ ನಿಧನರಾಗಿದ್ದಾರೆ. ಮೃತರಿಗೆ ತಾಲ್ಲೂಕಿನ ಬೆಳ್ತೂರು ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕಿಯವರಾದ ಗೌರಮ್ಮ ನವರು, ಇಬ್ಬರು ಪುತ್ತರು ,ಸಹೋದರರು, ಸಹೋದರಿಯರು, ಭಾವಂದಿರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯು ನೆನ್ನೆ ದಿನಾಂಕ: 08-10-2025 ರ ಮಂಗಳವಾರ ಆಲಂಬಾಡಿಕಾವಲು ಗ್ರಾಮದಲ್ಲಿ ನೆರವೇರಿದೆ.

ಸಂತಾಪ: ನಿಧನಕ್ಕೆ ಶಾಸಕರು, ಮಾಜಿ ಸಚಿವರು, ಮಾಜಿ ಶಾಸಕರುಗಳು, ಸಮಾಜ ಸೇವಕರುಗಳು,ಜನಪ್ರತಿನಿಧಿಗಳು, ತಾಲ್ಲೂಕು ಕುರುಬ ಸಂಘ, ಯುವ ಕುರುಬರ ಸಂಘ, ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಶಿಕ್ಷಕ ವೃಂಧ ಹಾಗೂ ಆಲಂಬಾಡಿಕಾವಲು ಗ್ರಾಮಸ್ಥರು ಸಂತಾಪ ಸೂಚಿಸಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.